MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 05 | ಸಂಚಿಕೆ: 50 | ಮಂಗಳವಾರ :09-12-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 05 | ISSUE: 50 | TUESDAY : 09-12-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

# ಸಿಎಂಗೆ ಎಚ್‌ಡಿಕೆ ತಿರುಗೇಟು



**ನವದೆಹಲಿ, ಡಿ.8–** ಕುಮಾರಸ್ವಾಮಿ ಮಂಡ್ಯಕ್ಕೆ ಏನು ಕೊಟ್ಟಿದ್ದಾರೆ ಎಂದು ಕೇಳಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ತೀಕ್ಷ್ಣವಾಗಿ ತಿರುಗೇಟು ನೀಡಿರುವ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ, ನಾನು ಕೊಟ್ಟಿದ್ದನ್ನು ಪಟ್ಟಿ ಮಾಡಿ ಹೇಳುತ್ತೇನೆ, ಮೊದಲು ಐದು ವರ್ಷ ಮುಖ್ಯಮಂತ್ರಿ ಆಗಿದ್ದಾಗ, ಈಗ ಏನೇನು ಕೊಟ್ಟಿದ್ದೀರಿ ಎಂಬುದನ್ನು ಹೇಳುವಂತೆ ಆಗ್ರಹಿಸಿದ್ದಾರೆ.

ನವದೆಹಲಿಯ ತಮ್ಮ ಗೃಹ ಕಚೇರಿಯಲ್ಲಿ ಇಂದು ಬೆಳಗ್ಗೆ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಸಚಿವರು; ನಾನು ಕೊಟ್ಟಿದ್ದನ್ನು ಹೇಳುತ್ತೇನೆ. ಸಿದ್ದರಾಮಯ್ಯ ಅವರೇ.. ನೀವು ರೈತರಿಗೆ ಏನು ಕೊಡುಗೆ ಕೊಟ್ಟಿದ್ದೀರಿ ಎಂಬುದನ್ನು ಹೇಳಿ. ಮಂಡ್ಯಕ್ಕೆ ನಿಮ್ಮ ಕೊಡುಗೆ ಏನು? ಹಿಂದಿನ ಐದು ವರ್ಷ ಆಡಳಿತದಲ್ಲಿ 200ಕ್ಕೂ ಹೆಚ್ಚು ರೈತರು ಮಂಡ್ಯದಲ್ಲಿ ಸರಣಿ ಆತ್ಮಹತ್ಯೆ ಮಾಡಿಕೊಂಡಿದ್ದೇ ನಿಮ್ಮ ಕೊಡುಗೆ. ಅಂಥ ಕಷ್ಟಕಾಲದಲ್ಲಿ ನಾನು ಅಧಿಕಾರಕ್ಕೆ ಬಂದ ಮೇಲೆ ಅದೇ ಜಿಲ್ಲೆಯ ರೈತರ 900 ಕೋಟಿ ಸಾಲ ಮನ್ನಾ ಮಾಡಿದೆ. ಇದಕ್ಕಿಂತ ಕೊಡುಗೆ ಬೇಕಾ? ನಿಮ್ಮ ಕಾಲದಲ್ಲಿ ರೈತರ ಜೀವ ಹೋಯಿತು, ನನ್ನ ಕಾಲದಲ್ಲಿ ಜೀವ ಉಳಿಯಿತು. ಇದು ನಿಮಗೆ ಗೊತ್ತಿರಲಿ ಎಂದು ವಾಗ್ದಾಳಿ ನಡೆಸಿದರು.

ರಾಜ್ಯದಲ್ಲಿ ರೈತರ ಪರಿಸ್ಥಿತಿ ಎಲ್ಲಿಗೆ ಬಂದಿದೆ ಎಂಬುದನ್ನು ನೋಡಿ. ಪ್ರವಾಹ, ಮಳೆಯಲ್ಲಿ ಜನ ಕಣ್ಣೀರಲ್ಲಿ ಕೈ ತೊಳೆಯುತ್ತಿದ್ದರೆ ನೀವು ಮೋಜು ಮಸ್ತಿ ಮಾಡುತ್ತಿದ್ದೀರಿ. ಕಲ್ಯಾಣ ಕರ್ನಾಟಕದಲ್ಲಿ ತೊಗರಿ ಬೆಳೆಗಾರರ ಪರಿಸ್ಥಿತಿ ಏನಾಗಿದೆ? ತೊಗರಿ ದರ ಕುಸಿದಿದೆ. ಅದಕ್ಕೆ ಏನು ಮಾಡಿದ್ದೀರಿ? ಈವರೆಗೆ ತೊಗರಿ ಖರೀದಿ ಕೇಂದ್ರಗಳನ್ನು ತೆರೆದಿಲ್ಲ. ಸರಿಯಾದ ಸಮಯದಲ್ಲಿ ರಾಜ್ಯ ಸರಕಾರ ಮಧ್ಯಪ್ರವೇಶ ಮಾಡಿ ರೈತರ ನೆರವಿಗೆ ಬರಬೇಕಿತ್ತು, ಬಂದಿಲ್ಲ ಯಾಕೆ? ಕೇಂದ್ರ ಸರಕಾರ ರಾಜ್ಯಕ್ಕೆ ಪರಿಶೀಲನಾ ತಂಡ ಕಳುಹಿಸಿ ಎನ್ನುತ್ತಾರೆ. ನಾಲ್ಕು ತಿಂಗಳ ಬಳಿಕ ಇವರಿಗೆ ಜ್ಞಾನೋದಯ ಆಗಿದೆ. ಈಗ ಕೇಂದ್ರ ತಂಡ ರಾಜ್ಯಕ್ಕೆ ಬಂದರೆ ಏನು ವರದಿ ಕೊಡುತ್ತಾರೆ? ಎಂದು ಅವರು ಖಾರವಾಗಿ ಪ್ರಶ್ನಿಸಿದರು.

ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನೀರಿನ ಹೆಜ್ಜೆ ಪುಸ್ತಕದ ಬಗ್ಗೆ ಪ್ರತಿಕ್ರಿಯಿಸಿದ ಕುಮಾರಸ್ವಾಮಿ ಅವರು; ಯಾರೋ ಬರೆದಿರುವ ಆ ಪುಸ್ತಕ ಕೇವಲ ಕಟ್ ಅಂಡ್ ಪೇಸ್ಟ್ ಅಷ್ಟೇ. ಬೇರೆ ಯಾವುದೋ ಪುಸ್ತಕದಲ್ಲಿ ಬರೆದಿರುವುದನ್ನೇ ಕತ್ತರಿಸಿ ಈ ಪುಸ್ತಕದಲ್ಲಿ ಅಂಟಿಸಿದ್ದಾರೆ! ನನಗೆ ಈ ಪುಸ್ತಕವನ್ನು ಯಾರೋ ತಂದುಕೊಟ್ಟರು. ಸಾಮಾನ್ಯವಾಗಿ ಯಾವುದೇ ಪುಸ್ತಕವಾದರೂ ಅದನ್ನು ಆಸಕ್ತಿಯಿಂದ ಓದುತ್ತೇನೆ. ಆದರೆ, ಈ ಪುಸ್ತಕ ನೋಡಿದಾಗ ಇಲ್ಲಿರುವುದು ಅವರ ಹೆಜ್ಜೆಗಳಲ್ಲ, ಯಾರದೋ ಹೆಜ್ಜೆಗಳನ್ನು ನನ್ನ ಹೆಜ್ಜೆಗಳು ಎಂದು ತೋರಿಸುವ ಕಸರತ್ತು ಮಾಡಿದ್ದಾರೆ ಎಂದು ಟೀಕಿಸಿದರು. ಮೇಕೆದಾಟು ಯೋಜನೆ ಬಗ್ಗೆ ಜನರನ್ನು ಯಾಮಾರಿಸುವುದಕ್ಕೆ ನಮ್ಮ ನೀರು– ನಮ್ಮ ಹಕ್ಕು ಎಂದು ಪಾದಯಾತ್ರೆ ಮಾಡಿದರು. ಆ ಹೆಸರಿನಲ್ಲಿ ಅವರು ಅಧಿಕಾರಕ್ಕೆ ಬಂದರು. ಮೇಕೆದಾಟು ಮಾತ್ರ ಇದ್ದಲ್ಲಿಯೇ ಇದೆ. ಸುಪ್ರೀಂ ಕೋರ್ಟ್ ಕೇಂದ್ರಿಯ ಜಲ ಆಯೋಗದ (2ನೇ ಪುಟಕ್ಕೆ)

# ರಾಯಚೂರು ಜಿಲ್ಲಾ ವ್ಯಾಪ್ತಿಯ ಎಲ್ಲ ರಸ್ತೆಗಳಲ್ಲಿನ ತಗ್ಗು ಗುಂಡಿ ಮುಚ್ಚಲು ಕ್ರಮವಹಿಸಿ: ಜಿಲ್ಲಾಧಿಕಾರಿ ನಿತೀಶ್ ಕೆ ಸೂಚನೆ



ಯುವಮಾರ್ಗ ಸುದ್ದಿ

**ರಾಯಚೂರು,ಡಿ.8–** ಜಿಲ್ಲಾಮಟ್ಟದ ರಸ್ತೆ ಸುರಕ್ಷತಾ ಸಮಿತಿ ಸಭೆಯು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರ ಅಧ್ಯಕ್ಷತೆಯಲ್ಲಿ ಡಿಸೆಂಬರ್ 6ರಂದು ನಡೆಯಿತು.

ಈ ವೇಳೆ ಮಾತನಾಡಿದ ಜಿಲ್ಲಾಧಿಕಾರಿಗಳು, ಸಾರ್ವಜನಿಕರಿಗೆ ಸುಗಮ ಸಾರಿಗೆ ಕಲ್ಪಿಸುವ ಹಿನ್ನೆಲೆಯಲ್ಲಿ ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ (ಎನ್ ಎಚ್ ಎಐ)ದ ರಸ್ತೆಗಳು ಸೇರಿದಂತೆ, ಲೋಕೋಪಯೋಗಿ, ಪಂಚಾಯತ್ ರಾಜ್ ಎಂಜಿನಿಯರಿಂಗ್ ಹಾಗೂ ಇನ್ನಿತರ ಇಲಾಖೆಗಳ ಅಧೀನದ ಎಲ್ಲ ರಸ್ತೆಗಳಲ್ಲಿನ ತಗ್ಗು ಗುಂಡಿಗಳನ್ನು ಕೂಡಲೇ ಗುರುತಿಸಿ ಯುದ್ಧೋಪಾದಿಯಲ್ಲಿ ರಸ್ತೆಗಳನ್ನು ಸರಿಪಡಿಸುವ ಕಾರ್ಯ ಮಾಡಬೇಕು ಎಂದು ಸೂಚನೆ ನೀಡಿದರು.

ಜಿಲ್ಲೆಯಾದ್ಯಂತ ಎಲ್ಲಾ ಕಡೆಗಿನ ರಸ್ತೆಗಳಲ್ಲಿ ಹಾಕಿರುವ ಹಂಪ್ಸಗಳು ಕಾಣುವುದೇ ಇಲ್ಲ. ಇದರಿಂದಾಗಿ ಹೆಚ್ಚಾಗಿ ದ್ವಿಚಕ್ರ ವಾಹನಗಳು ಮೇಲೆ ಪುಟಿದು ಅಪಘಾತಕ್ಕೀಡಾಗುತ್ತವೆ. ಈ ಬಗ್ಗೆ ಕೂಡಲೇ ಗಮನ ಹರಿಸಿ ಅವೈಜ್ಞಾನಿಕವಾಗಿ ಹಾಕಿದ ಎಲ್ಲ ಹಂಪ್ಸಗಳನ್ನು ಸರಿಪಡಿಸಬೇಕು. ಕಡ್ಡಾಯವಾಗಿ ಎರಡೂ ಬದಿಯಲ್ಲಿ ಬಿಳಿಪಟ್ಟಿ ಅಳವಡಿಸಿ ಹಂಪ್ಸ್ ಕಾಣುವ ಹಾಗೆ ಸುರಕ್ಷತಾ ಕ್ರಮಕ್ಕೆ ಕೂಡಲೇ ಮುಂದಾಗಬೇಕು. ಗ್ರಾಮೀಣ, ತಾಲೂಕು, ಜಿಲ್ಲಾ ಸೇರಿದಂತೆ ಎಲ್ಲಾ ರಸ್ತೆಗಳಲ್ಲಿ ಸೂಚನಾ ಫಲಕಗಳನ್ನು ಅಳವಡಿಸಿ ಅಪಘಾತ ರಹಿತ ಸಂಚಾರಕ್ಕೆ ಅಗತ್ಯ ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಅಂತಾರಾಜ್ಯ ಹೈದ್ರಾಬಾದ್ ಸೇರಿದಂತೆ ಪ್ರಮುಖ ನಗರಗಳಿಗೆ ಸಂಪರ್ಕ ಕಲ್ಪಿಸುವ ಶಕ್ತಿನಗರ ಬಳಿಯಲ್ಲಿನ ಬೈಪಾಸನಲ್ಲಿನ ಅಪಘಾತ ಪ್ರಕರಣಗಳ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು.

ಈ ಬಗ್ಗೆ ತುರ್ತಾಗಿ ಗಮನ ಹರಿಸಿ, ಲೋಕೋಪಯೋಗಿ ಇಲಾಖೆಯ ಸುಪರ್ದಿಯಲ್ಲಿನ ಒತ್ತುವರಿ ರಸ್ತೆಯನ್ನು, ವಶಕ್ಕೆ ಪಡೆದು ಡಾಂಬರೀಕರಣಗೊಳಿಸಿ ರಸ್ತೆ ಅಗಲೀಕರಣಕ್ಕೆ ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಶಾಲಾ ವಾಹನಗಳ ಪಿಟ್ನೆಸ್ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು. ರಾಯಚೂರು ಜಿಲ್ಲೆಯಲ್ಲಿ 444 ವಾಹನಗಳಿಗೆ ಫಿಟನೆಸ್ ಇರುತ್ತವೆ. ಇನ್ನುಳಿದ 175 ವಾಹನಗಳ ಪಿಟನೆಸ್ ಮುಗಿದಿರುತ್ತದೆ. ಈ ವಾಹನಗಳಿಗೆ ಪಿಟನೆಸ್ ಮಾಡಲು ನೊಟೀಸ್ ಜಾರಿ ಮಾಡಲಾಗಿದೆ ಎಂದು ಆರ್‌ಟಿಓ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಮಕ್ಕಳ ಸುರಕ್ಷತೆ ದೃಷ್ಟಿಯಿಂದ ಶಾಲಾ ವಾಹನಗಳು ಎಲ್ಲ ರೀತಿಯಿಂದಲೂ ಸುಭದ್ರವಾಗಿರಬೇಕು. ಈ ಬಗ್ಗೆ ಆಯಾ ಶಾಲೆಗಳ ಮಾಲೀಕರು ಗಮನ ಹರಿಸಬೇಕು. ಪಿಟನೆಸ್ ಪ್ರಮಾಣಪತ್ರ ಕಡ್ಡಾಯ ಇರುವಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದರು.

ಈ ಹಿಂದೆ, ಮಹಾನಗರ ಪಾಲಿಕೆ ಹಾಗೂ ಲೋಕೋಪಯೋಗಿ ಇಲಾಖೆಯ ಜಂಟಿ ಪ್ರಗತಿ ಪರಿಶೀಲನಾ ಸಭೆಯಲ್ಲಿ, ನಗರ ಮತ್ತು ಜಿಲ್ಲಾ ವ್ಯಾಪ್ತಿಯ ವಿವಿಧ ಇಲಾಖೆಗಳ ಅಧೀನದ ರಸ್ತೆ ಹಾಗೂ ರಾಜ್ಯ ಮತ್ತು ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗಳನ್ನು ತ್ವರಿತಗೊಳಿಸಲು ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಲೋಕೋಪ (2ನೇ ಪುಟಕ್ಕೆ)

# ಬಾಣಂತಿಯರ ಸರಣಿ ಸಾವು ಪ್ರಕರಣ, ಸಂತ್ರಸ್ತ ಕುಟುಂಬಗಳಿಗೆ 25 ಲಕ್ಷ ರೂ. ಪರಿಹಾರಕ್ಕೆ ಆಗ್ರಹ

ಯುವಮಾರ್ಗ ಸುದ್ದಿ



**ಸಿಂಧನೂರು,ಡಿ.8–** ತಾಲೂಕು ಸಾರ್ವಜನಿಕ ಆಸ್ಪತ್ರೆಯಲ್ಲಿ ಹೆರಿಗೆಯಾದ ನಂತರ 2024ರ ಅಕ್ಟೋಬರ್ ತಿಂಗಳಿನಲ್ಲಿ ರಿಮ್ಸ್ ಚಿಕಿತ್ಸೆಗೆ ದಾಖಲಾದ ನಾಲ್ವರು ಬಾಣಂತಿಯರ ಸರಣಿ ಸಾವಾಗಿದ್ದು, ಮೃತ ಮಹಿಳೆಯರ ಸಂತ್ರಸ್ತ ಕುಟುಂಬಗಳಿಗೆ ಇದುವರೆಗೂ ಸರ್ಕಾರದಿಂದ ಪರಿಹಾರ ದೊರಕಿರುವುದಿಲ್ಲ. ಈ ಕೂಡಲೇ ಆ ಕುಟುಂಬಗಳಿಗೆ ರೂ.25 ಲಕ್ಷ ಪರಿಹಾರ ಒದಗಿಸಬೇಕು ಹಾಗೂ ಅನಾಥರಾದ ನಾಲ್ಕು ಮಕ್ಕಳ ಪೋಷಣೆಯ ಜವಾಬ್ದಾರಿಯನ್ನು ಸರ್ಕಾರವೇ ಹೊತ್ತುಕೊಳ್ಳುವಂತೆ ಆಗ್ರಹಿಸಿ, ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಬಣದ ತಾಲೂಕು ಅಧ್ಯಕ್ಷ ಮಂಜುನಾಥ ಗಾಣಗೇರ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಚೌದರಿ ಅವರಿಗೆ ಸೋಮವಾರ ಬೆಂಗಳೂರಿನಲ್ಲಿ ಮನವಿ ಸಲ್ಲಿಸಿ ಒತ್ತಾಯಿಸಿದ್ದಾರೆ.

ಸಿಂಧನೂರು ತಾಲೂಕು ಸಾರ್ವಜನಿಕ ಆಸ್ಪತ್ರೆಗೆ ಹೆರಿಗಾಗಿ ದಾಖಲಾಗಿದ್ದ ತಾಲೂಕಿನ ಆರ್.ಎಚ್.ಕ್ಯಾಂಪ್–3ರ ಮಹಿಳೆ ಮೌಸಂಬಿ ಮಂಡಲ್ ಗಂಡ ಮಹೇಶ್ವರ ಮಂಡಲ್ ಹೆರಿಗೆ ನಂತರ ದಿನಾಂಕ: 21–10–2024ರಂದು ಮೃತಪಟ್ಟಿರುತ್ತಾರೆ. 21–10–2024ರಂದು ಆಸ್ಪತ್ರೆಗೆ ದಾಖಲಾಗಿದ್ದ ರಾಗಲಪರ್ವಿ ಗ್ರಾಮದ ಚನ್ನಮ್ಮ ಗಂಡ ಬಸವರಾಜ ನಾಯಕ ಅವರೂ 8 ದಿನಗಳ ನಂತರ ರಿಮ್ಸ್ನಲ್ಲಿ ನವೆಂಬರ್ 2ರಂದು ಸಾವಿಗೀಡಾಗಿದ್ದಾರೆ. ದಿನಾಂಕ: 28–10–2024ರಂದು ಸರ್ಕಾರಿ ಆಸ್ಪತ್ರೆಗೆ ದಾಖಲಾಗಿದ್ದ, ಉದ್ಬಾಳ.ಜೆ ಗ್ರಾಮದ ಗರ್ಭಿಣಿ ಮಹಿಳೆ ಚಂದ್ರಕಲಾ ಹೆರಿಗೆ ನಂತರ ಅಸ್ವಸ್ಥಗೊಂಡು ರಾಯಚೂರಿನ ರಿಮ್ಸ್ನಲ್ಲಿ ಮೃತಪಟ್ಟಿದ್ದಾರೆ ಹಾಗೂ ದಿನಾಂಕ: 30–10–2024ರಂದು ನಗರದ ತಾಲೂಕು ಸಾರ್ವಜನಿಕ ಆಸ್ಪತ್ರೆಗೆ ಹೆರಿಗೆಗಾಗಿ ದಾಖಲಾಗಿದ್ದ ಮಸ್ಕಿ ತಾಲೂಕಿನ ಅಂಕುಶದೊಡ್ಡಿ ಗ್ರಾಮದ ರೇಣುಕಮ್ಮ ಗಂಡ ಬಸವರಾಜ ಹೆರಿಗೆ ನಂತರ ಅಸ್ವಸ್ಥಗೊಂಡು ರಾಯಚೂರಿನ ಜಿಲ್ಲಾಸ್ಪತ್ರೆಯಲ್ಲಿ ಮೃತಪಟ್ಟಿರುತ್ತಾರೆ. ಈ ನಾಲ್ಕು ಪ್ರಕರಣಗಳು ಸರಣಿಯಾಗಿ ಘಟಿಸಿವೆ. (2ನೇಪುಟಕ್ಕೆ)

# ಕಟ್ಟಡ ಮತ್ತು ಇತರ ನಿರ್ಮಾಣ ಕಾರ್ಮಿಕರಿಗೆ ನಿವೇಶನ ನೀಡುವಂತೆ ಶಾಸಕರಿಗೆ ಮನವಿ


ಯುವಮಾರ್ಗ ಸುದ್ದಿ



**ಮಾನ್ವಿ,ಡಿ.8–**ಪಟ್ಟಣದಲ್ಲಿ ಪ್ರಗತಿಪರ ಕರ್ನಾಟಕ ಕಟ್ಟಡ ಮತ್ತು ಇತರ ನಿರ್ಮಾಣ ಕಾರ್ಮಿಕರ ಯೂನಿಯನ್ ತಾಲೂಕು ಘಟಕದಿಂದ ಶಾಸಕ ಹಂಪಯ್ಯನಾಯಕ ರವರಿಗೆ ರಾಜ್ಯ ಸಮಿತಿ ಸದಸ್ಯರಾದ ಸದಾನಂದ ಮನವಿ ಸಲ್ಲಿಸಿ ಮಾತನಾಡಿ ಮಾನ್ವಿ ಪಟ್ಟಣದಲ್ಲಿ 10 ಸಾವಿರ ಕ್ಕೂ ಹೆಚ್ಚು ನೊಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿದ್ದಾರೆ ಇವರುಗಳು .ಅಸಂಘಟಿತ ವಲಯದಲ್ಲಿ ಕೆಲಸ ನಿರ್ವಹಿಸುವ ಕಾರ್ಮಿಕರಾಗಿದ್ದಾರೆ ಹೆಚ್ಚಿನ ಕಾರ್ಮಿಕರು ವಾಸಮಾಡುವುದಕ್ಕೆ ಮನೆಗಳು ಇಲ್ಲದೆ ,ಮನೆ ಕಟ್ಟಿಕೊಳ್ಳುವುದಕ್ಕೆ ನಿವೇಶನ ಇಲ್ಲದೆ ಹೆಚ್ಚಿನ ಸಂಖ್ಯೆಯಲ್ಲಿ ಕೊಳೆಗೇರಿ ಪ್ರದೇಶಗಳಲ್ಲಿ ವಾಸಮಾಡುತ್ತಿದ್ದಾರೆ .ಇವರಿಗೆ ಕೂಲಿ ಹಾಗೂ ಕೆಲಸದ ಭದ್ರತೆಕೂಡ ಇಲ್ಲದೆ ಇರುವುದರಿಂದ ಇಂತಹ ಕಾರ್ಮಿಕರನ್ನು ಗುರುತಿಸಿ ಪಟ್ಟಣದಲ್ಲಿ ಸೂಕ್ತವಾದ ನಿವೇಶನವನ್ನು ನೀಡಿದಲ್ಲಿ ಅವರುಗಳು ಕೇಂದ್ರ ಮತ್ತು ರಾಜ್ಯಗಳಿಂದ ಜಾರಿಯಾಗುವ ಪ್ರಧಾನಮಂತ್ರಿ ಆವಾಸ್ ಯೋಜನೆ ಆಶ್ರಯ ಯೋಜನೆ,ಹಾಗೂ ಕೊಳಗೇರಿ ನಿರ್ಮೂಲನ ಅಭಿವೃದಿ ಮಂಡಳಿಗಳ ವಿವಿಧ ಯೋಜನೆಗಳಡಿಯಲ್ಲಿ ಮನೆಗಳನ್ನು ಕಟ್ಟಿಕೊಳ್ಳುವುದಕ್ಕೆ ಸಾಧ್ಯವಾಗುತ್ತದೆ ಎಂದು ಒತ್ತಾಯಿಸಿದರು. ತಾಲೂಕ ಉಪಾಧ್ಯಕ್ಷ ಅಮರೇಶ, ಸಂ.ಕಾ.ಕಾಶೀಂ, ರಮೇಶಕ ವಿತಾಳ, ಭೀಮಣ್ಣ ಕಲ್ಲೂರ, ರಮೇಶ ಸಿರವಾರ, ಸೀತಾ ರಾಮ, ಆದೆಪ್ಪ,ಮುತ್ತಯ್ಯ ,ಬಾಲರಾ ಜ,ಮಹಮ್ಮದ್‌ಸಾಬ್, ಮಂಜುನಾಥ ಸೇರಿದಂತೆ ಅನೇಕರು ಉಪಸ್ಥಿತರಿದರು.

# ಪ್ರಾಧ್ಯಾಪಕ ಸೈಯದ್ ಮಿನಾಜುಲ್ ಹಸನ್ ಅವರ ಸೇವೆ, ಸಾಧನೆ ಶ್ಲಾಘನೀಯ: ಡಾ.ರಝಾಕ್ ಉಸ್ತಾದ್

ಯುವಮಾರ್ಗ ಸುದ್ದಿ



**ಮಾನ್ವಿ,ಡಿ.8–**'ವಿದ್ಯಾರ್ಥಿಗಳಿಗೆ ಶಿಕ್ಷಣದ ಜೊತೆಗೆ ಉತ್ತಮ ವ್ಯಕ್ತಿತ್ವ ಹಾಗೂ ಭವಿಷ್ಯ ರೂಪಿಸುವಲ್ಲಿ ಪ್ರಾಧ್ಯಾಪಕರ ಜವಾಬ್ದಾರಿ ಮಹತ್ವದ್ದಾಗಿದೆ. ಈ ನಿಟ್ಟಿನಲ್ಲಿ ನೂರಾರು ಯುವಕರಿಗೆ ವೃತ್ತಿ ಬದುಕು ಕಟ್ಟಿಕೊಟ್ಟ ಪ್ರಾಧ್ಯಾಪಕ ಸೈಯದ್ ಮಿನಾಜುಲ್ ಹಸನ್ ಅವರ ಸೇವೆ, ಸಾಧನೆ ಶ್ಲಾಘನೀಯ' ಎಂದು ಕೆಪಿಸಿಸಿ ಮಾಧ್ಯಮ ವಕ್ತಾರ ರಝಾಕ್ ಉಸ್ತಾದ್ ಹೇಳಿದರು.

ಭಾನುವಾರ ಸಂಜೆ ಪಟ್ಟಣದ ಗ್ಯಾಲಕ್ಸಿ ಫಂಕ್ಷನ್ ಹಾಲ್ ನಲ್ಲಿ ಭಾರತೀಯ ಐಟಿ ಉದ್ಯಮಗಳಲ್ಲಿ ಸೈಬರ್ ಅಪರಾಧಗಳ ನಿಯಂತ್ರಣಕ್ಕಾಗಿ ಕೃತಕ ಬುದ್ಧಿಮತ್ತೆಯ ಬಳಕೆ ಕುರಿತು ಸಂಶೋಧನಾ ಪ್ರಬಂಧ ಮಂಡಿಸಿ, ಅಲಿಗಡ್ ನ ಮಂಗಲಯಾತನ ವಿಶ್ವವಿದ್ಯಾಲಯದ ಕಂಪ್ಯೂಟರ್ ವಿಜ್ಞಾನ ವಿಭಾಗದ ವತಿಯಿಂದ ಪಿಎಚ್.ಡಿ (ಡಾಕ್ಟರೇಟ್) ಪದವಿಗೆ ಭಾಜನರಾದ ಪ್ರಾಧ್ಯಾಪಕ ಸೈಯದ್ ಮಿನಾಜುಲ್ ಹಸನ್ ಅವರಿಗೆ ಗೆಳೆಯರು ಹಾಗೂ ವಿದ್ಯಾರ್ಥಿಗಳ ಬಳಗ ಹಮ್ಮಿಕೊಂಡಿದ್ದ ಅಭಿನಂದನಾ ಸಮಾರಂಭದಲ್ಲಿ ಅವರು ಮಾತನಾಡಿದರು.

ಪ್ರಾಧ್ಯಾಪಕ ಡಾ.ರವಿ ಮಸ್ಕಿ ಅವರು ಸೈಬರ್ ಅಪರಾಧಗಳ ನಿಯಂತ್ರಣ ಕುರಿತು ಡಾ.ಮಿನಾಜುಲ್ ಹಸನ್ ಅವರು ಕೈಗೊಂಡಿರುವ ಸಂಶೋಧನೆ ಕುರಿತು ವಿವರಿಸಿದರು.

ಮುಖಂಡರಾದ ಹ್ಯಾರಿಸ್ ಸಿದ್ದಿಕಿ, ಸಾಜಿದ್ ಖಾದ್ರಿ, ಖಾಲೀದ್ ಖಾದ್ರಿ, ಸುರೇಶ ಕುರ್ಡಿ, ಆರಿಫ್ ಮಿಯಾ ಚಾಗಬಾವಿ, ತಾಯಪ್ಪ ಬಿ.ಹೊಸೂರು, ಮೊಹಮ್ಮದ್ ಸಾಜಿದ್ ರಾಯಚೂರು, ಮಹಾಂತೇಶ ಓಲೇಕಾರ, ನಿವೃತ್ತ ಶಿಕ್ಷಕ ರಾದ ಹುಸೇನಪ್ಪ ಕುರ್ಡಿ, ಮಧುಕುಮಾರಿ ಪಾಂಡೆ, ಮಹಿಮೂದಾ ಬೇಗಂ ಮತ್ತಿತರರು ಮಾತನಾಡಿ, ಸೈಯದ್ ಮಿನಾಜುಲ್ ಹಸನ್ ಅವರ ಶೈಕ್ಷಣಿಕ ಸಾಧನೆ ಮತ್ತು ಸೇವೆಯ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ಗೌರವ ಸನ್ಮಾನ ಸ್ವೀಕರಿಸಿ ಮಾತನಾಡಿದ ಪ್ರಾಧ್ಯಾಪಕ ಸೈಯದ್ ಮಿನಾಜುಲ್ ಹಸನ್, ನನ್ನ ಶೈಕ್ಷಣಿಕ (2ನೇಪುಟಕ್ಕೆ)

# ಮಾದರ ಚೆನ್ನಯ್ಯ ಜಯಂತಿ ಅಂಗವಾಗಿ ಪ್ರತಿಭಾ ಪುರಸ್ಕಾರ




ಯುವಮಾರ್ಗ ಸುದ್ದಿ

**ಲಿಂಗಸುಗೂರು,ಡಿ.8–** ಕುಲತಿಲಕ ಶಿವಶರಣ ಮಾದರ ಚೆನ್ನಯ್ಯ ಜಯಂತಿ ಅಂಗವಾಗಿ ಡಿ.14 ರಂದು ಬೆಳಿಗ್ಗೆ 11.00 ಘಂಟೆಗೆ ಪ್ರತಿಭಾ ಪುರಸ್ಕಾರ ಹಾಗೂ ಅಭಿವಂದನಾ ಸಮಾರಂಭವನ್ನು ಡಾ.ಬಿ. ಆರ್.ಅಂಬೇಡ್ಕರ್ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ನೌಕರರ ಸಂಘದ ಅಧ್ಯಕ್ಷ ಬಸವರಾಜ ಕೆ.ಇ.ಬಿ. ತಿಳಿಸಿದರು.

ಪಟ್ಟಣ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಈ ಸಮಾರಂಭದಲ್ಲಿ ಸಮಾಜದ ಗುರುಗಳು ಹಾಗೂ ಜನಪ್ರತಿನಿಧಿಗಳು ಅಧಿಕಾರಿಗಳು ಆಗಮಿ ಸಲ್ಲಿದ್ದಾರೆ. ಎಸ್.ಎಸ್. ಎಲ್.ಸಿ, ಪಿಯುಸಿ ದ್ವಿತಿಯ ವರ್ಷದಲ್ಲಿ ಶೇ.85 ಕ್ಕಿಂತ ಹೆಚ್ಚು ಅಂಕಪಡೆದ ವಿದ್ಯಾರ್ಥಿಗಳು ಹಾಗೂ ಎ.ಬಿ.ಬಿ.ಎಸ್. ಪ್ರವೇಶ ಪಡೆದ ವಿದ್ಯಾರ್ಥಿ ಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಸನ್ಮಾನಿಸಲಾಗುವುದು ಅರ್ಹ ವಿದ್ಯಾರ್ಥಿಗಳು ಡಿ.10ರ ಒಳಗಾಗಿ ಅಂಕಪಟ್ಟಿ ಜಾತಿ ಪ್ರಮಾಣ ಪತ್ರ ಅಗತ್ಯ ದಾಖಲೆಗಳನ್ನು ಬಸವಲಿಂಗಪ್ಪ ಉಪನ್ಯಾಸಕರು 974033 8346 ಹಾಗೂ ಬಸವರಾಜ.ಕೆ 9449688895 ಇವರಲ್ಲಿ ಸಲ್ಲಿಸಿಬೇಕು. ಹೆಚ್ಚಿನ ಮಾಹಿತಿಗಾಗಿ ಸದರಿ ನಂಬರ್‌ಗಳಿಗೆ ಕರೆ ಮಾಡಬೇಕೆಂದು ತಿಳಿಸಿದರು. ಈ ಸಂದರ್ಭದಲ್ಲಿ ನಿವೃತ್ತ ಶಿಕ್ಷಕರಾದ ಬಸವರಾಜ ಮ್ಯಾಗೇರಿ, ಗ್ಯಾನಪ್ಪ ಕಟ್ಟಿಮನಿ, ಕೆಂಚಪ್ಪ, ರಮೇಶ ಗೋಸ್ಲೆ, ಮೋಹನ್ ಗೋಸ್ಲೆ, ಅಮರೇಶ ಮ್ಯಾಗೇರಿ

## ಮೊದಲನೇಯ ಪುಟದಿಂದ

# ಸಿಎಂಗೆ ಎಚ್‌ಡಿಕೆ ತಿರುಗೇಟು

ಹೋಗಿ ವಾದ ಮಂಡಿಸಿ ಎಂದು ಹೇಳಿದ್ದಾರೆ. ತಮಿಳುನಾಡಿನಲ್ಲಿ ಅಧಿಕಾರ ನಡೆಸುತ್ತಿರುವವರು ಇವರು ರಾಜಕೀಯ ಪಾರ್ಟನರ್?ಗಳೇ ಆಗಿದ್ದಾರೆ. ಇವರು ಹೋಗಿ ಕುಳಿತು ಮಾತನಾಡಬೇಲ್ಲವೇ ಎಂದು ಕುಮಾರಸ್ವಾಮಿ ಅವರು ಪ್ರಶ್ನೆಯೊಂದಕ್ಕೆ ಉತ್ತರ ನೀಡಿದರು.

ಮೇಕೆದಾಟು ಪ್ರದೇಶದಲ್ಲಿ ಸುಮಾರು 12 ಸಾವಿರ ಎಕರೆಯಷ್ಟು ಅರಣ್ಯ ಮುಳಗಡೆ ಆಗುತ್ತದೆ. ವನ್ಯ ಸಂಪತ್ತು ನಾಶವಾಗುತ್ತದೆ ಎಂದು ಹೇಳುತ್ತಿದ್ದಾರೆ. ಬರೀ ಕೇಂದ್ರ ಸರಕಾರದ ಅಧಿಕಾರ ಮಾತ್ರವಲ್ಲ, ರಾಜ್ಯ ಸರಕಾರಕ್ಕೂ ಹಕ್ಕು, ಜವಾಬ್ದಾರಿ ಇರುತ್ತದೆ. ಪಲಾಯನ ಮಾಡುವ ಅಗತ್ಯವಿಲ್ಲ, ಇನ್ನೆಷ್ಟು ದಿನ ನುಣುಚಿಕೊಳ್ಳುತ್ತೀರಿ? ದೇಶಕ್ಕೆ ಸ್ವಾತಂತ್ರ್ಯ ಬಂದು 75 ವರ್ಷಗಳು ಮೀರಿದೆ. ಅದರಲ್ಲಿ 50 ವರ್ಷಕಾಲ ಕೇಂದ್ರ ಮತ್ತು ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷವೇ ಆಡಳಿತ ನಡೆಸಿದೆ. ಆಗ ಮೇಕೆದಾಟು ಬಗ್ಗೆ ಏನು ಮಾಡಿದಿರಿ ಎಂದು ಜನರಿಗೆ ಹೇಳಬೇಕಲ್ಲವೇ? ಎಂದು ರಾಜ್ಯ ಸರಕಾರವನ್ನು ಕೇಂದ್ರ ಸಚಿವರು ಪ್ರಶ್ನಿಸಿದರು.

ಮಾತೆತ್ತಿದರೆ ರಾಜ್ಯಕ್ಕೆ ಕೇಂದ್ರ ಸರಕಾರ ಸಹಕಾರ ನೀಡುತ್ತಿಲ್ಲ ಎಂದು ಸಬೂಬು ಹೇಳುತ್ತಿದ್ದಾರೆ. ಹಾಗಾದರೆ ರಾಜ್ಯ ಸರಕಾರ ಮಾಡುತ್ತಿರುವುದೇನು? ನಾನು ಕೇಂದ್ರ ಸಚಿವನಾದ ಕೂಡಲೇ ರಾಜ್ಯಕ್ಕೆ ಒಳ್ಳೆಯದಾಗಲಿ ಎಂದು ಕುದುರೆಮುಖ ಉಕ್ಕು ಮತ್ತು ಕಬ್ಬಿಣ ಕಾರ್ಖಾನೆಯ ದೇವದಾರಿ ಗಣಿ ಯೋಜನೆಗೆ ಹಣಕಾಸು ಖಾತರಿ ನೀಡುವ ಕಡತಕ್ಕೆ ಸಹಿ ಹಾಕಿದೆ. ಮರು ದಿನದಿಂದಲೇ ಅದಕ್ಕೆ ಅಡ್ಡಿ ಉಂಟು ಮಾಡುವ ಕೆಲಸಕ್ಕೆ ರಾಜ್ಯ ಸರಕಾರ ಮುಂದಾಯಿತು.

ಈಗ ಅವರ ಪಕ್ಷದ ಜನಪ್ರತಿನಿಧಿ ಒಬ್ಬರು ಬಳ್ಳಾರಿಯಲ್ಲಿ ದಿನನಿತ್ಯ ಪ್ರತಿಭಟನೆ ಮಾಡಿಸುವ, ಜನರನ್ನು ಎತ್ತಿ ಕಟ್ಟುವ ಕೆಲಸ ಮಾಡುತ್ತಿದ್ದಾರೆ. ತಮಗೆ ವೈಯಕ್ತಿಕವಾಗಿ ರಾಷ್ಟ್ರೀಯ ಖನಿಜಾಭಿವೃದ್ಧಿ ನಿಗಮ (ಎನ್‌ಎಂಡಿಸಿ) ದಿಂದ ಲಾಭವಾಗುವ ಕೆಲಸ ಆಗಲಿಲ್ಲ ಎಂದು ಯೋಜನೆ ಅಡ್ಡಿಪಡಿಸುತ್ತಿದ್ದಾರೆ. ಹೀಗಾದರೆ ರಾಜ್ಯದ ಅಭಿವೃದ್ಧಿ ಸಾಧ್ಯವೇ? ಸಹಕಾರ ಪಡೆಯುವುದು, ಕೊಡುವುದು ಎಂದರೆ ಹೀಗೇನಾ? ಎಂದು ಸಚಿವ ಕುಮಾರಸ್ವಾಮಿ ಅವರು ಖಾರವಾಗಿ ಪ್ರಶ್ನಿಸಿದರು.

## ರಾಯಚೂರು ಜಿಲ್ಲಾ ವ್ಯಾಪ್ತಿಯ ಎಲ್ಲ ರಸ್ತೆಗಳಲ್ಲಿನ ತಗ್ಗು ಗುಂಡಿ ಮುಚ್ಚಲು ಕ್ರಮವಹಿಸಿ: ಜಿಲ್ಲಾಧಿಕಾರಿ ನಿತೀಶ್ ಕೆ ಸೂಚನೆ

ಯೋಗಿ ಇಲಾಖೆಯಿಂದ ಮುಖ್ಯ ರಸ್ತೆಗಳ ನಿರ್ವಹಣೆ ಮತ್ತು ಹೊಸ ರಸ್ತೆ ನಿರ್ಮಾಣಕ್ಕೆ ತಿಳಿಸಲಾಗಿದೆ. ಈ ಬಗ್ಗೆ ಅಧಿಕಾರಿಗಳು ಗಮನ ಹರಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

*ಹೇಲ್ಮೆಟ ಬಳಕೆ:* ರಾಯಚೂರು ಜಿಲ್ಲೆಯಲ್ಲಿ ಹೇಲ್ಮೆಟ ಬಳಕೆಯ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು. ಜೀವನ ತುಂಬಾ ಮುಖ್ಯ. ಹೆಲ್ಮೆಟ್ ಧರಿಸಿ ಪ್ರಾಣ ಉಳಿಸಿಕೊಂಡ ಅನೇಕ ಪ್ರಕರಣಗಳ ಬಗ್ಗೆ ಜನತೆಗೆ ತಿಳಿವಳಿಕೆ ನೀಡಿ ಹೆಲ್ಮೇಟ ಧರಿಸಲು ನಿರಂತರವಾಗಿ ಜಾಗೃತಿ ಕಾರ್ಯಕ್ರಮ ನಡೆಸಿದ್ದೇವೆ. ಪ್ರಮುಖ ಸ್ಥಳಗಳಲ್ಲಿ ಬ್ಯಾನರ್ ಅಳವಡಿಸಿ ತಿಳಿವಳಿಕೆ ನೀಡುತ್ತಿದ್ದೇವೆ ಎಂದು ಜಿಲ್ಲಾ ಪೊಲೀಸ್ ಇಲಾಖೆಯ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

*ರಾಯಚೂರು ಸಿಟಿಯಲ್ಲಿ ನಿರ್ವಹಣೆ:* ಹಲವು ವರ್ಷಗಳ ನಂತರ ಮೊದಲ ಬಾರಿಗೆ ರಾಯಚೂರು ಮಹಾನಗರ ಪಾಲಿಕೆಯು ರಸ್ತೆ ನಿರ್ವಹಣಾ ಟೆಂಡರ್ ಕರೆದಿದ್ದು, ರಾಯಚೂರು ಸಿಟಿ ವ್ಯಾಪ್ತಿಯ ರಸ್ತೆಗಳಲ್ಲಿನ ತಗ್ಗು ಗುಂಡಿ ಮುಚ್ಚುವ ಕಾರ್ಯ ನಡೆದಿದೆ. ರಸ್ತೆ ಸರಿಪಡಿಸುವ ಕಾರ್ಯವನ್ನು ಅಚ್ಚುಕಟ್ಟಾಗಿ ಮಾಡುವಂತೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಆದಾಗ್ಯೂ ನಗರದಲ್ಲಿನ ರಸ್ತೆಗಳಲ್ಲಿ ತಗ್ಗು ಗುಂಡಿಗಳು ಹಾಗೆ ಇವೆ ಎಂದು ದೂರುಗಳು ಬಂದಲ್ಲಿ ಯಾವುದೇ ಕೆಲಸವನ್ನು ಅನುಮೋದಿಸಲಾಗುವುದಿಲ್ಲ ಎಂದು ಎಂಜಿನಿಯರ್‌ಗಳಿಗೆ ಎಚ್ಚರಿಕೆ ನೀಡಿದ್ದಾಗಿ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ತಿಳಿಸಿದರು.

*ಅಪಘಾತ ಪ್ರಕರಣಗಳು:* ರಾಯಚೂರು ಜಿಲ್ಲೆಯಲ್ಲಿ ರಾಷ್ಟ್ರೀಯ ಹೆದ್ದಾರಿ, ರಾಜ್ಯ ಹೆದ್ದಾರಿ ಮತ್ತು ಇತರೆ ರಸ್ತೆಗಳಲ್ಲಿ ಮಾರಣಾಂತಿಕ ಅಪಘಾತ ಪ್ರಕರಣಗಳು 2022ರಲ್ಲಿ 300, 2023ರಲ್ಲಿ 264, 2024ರಲ್ಲಿ 297, 2025ರ ಡಿಸೆಂಬರ್ 5ರವರೆಗೆ 254 ಸಂಭವಿಸಿ 1177 ಜನರು ಮೃತಪಟ್ಟಿದ್ದು, 2574 ಜನರು ಗಾಯಗೊಂಡಿದ್ದಾರೆ ಎಂದು ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.ಸಭೆಯಲ್ಲಿ ಲೋಕೋಪಯೋಗಿ ಇಲಾಖೆಯ ಅಭಿಯಂತರರಾದ ವೆಂಕಟೇಶ ಗಳಗ, ಪೊಲೀಸ್ ಇಲಾಖೆ, ಆರ್ ಟಿಓ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಇದ್ದರು.

## ಪ್ರಾಧ್ಯಾಪಕ ಸೈಯದ್ ಮಿನಾಜುಲ್ ಹಸನ್ ಅವರ ಸೇವೆ, ಸಾಧನೆ ಶ್ಲಾಘನೀಯ: ಡಾ.ರಝಾಕ್ ಉಸ್ತಾದ್

ಹಾಗೂ ವೃತ್ತಿ ಜೀವನದ ಯಶಸ್ಸಿಗೆ ತಂದೆ–ತಾಯಿಯ ಆಶೀರ್ವಾದ, ವಿದ್ಯೆ ಕಲಿಸಿದ ಗುರುಗಳ ಮಾರ್ಗದರ್ಶನ, ಕುಟುಂಬ ಸದಸ್ಯರ ಪ್ರೋತ್ಸಾಹ, ಸ್ನೇಹಿತರು ಹಾಗೂ ಸಹೋದ್ಯೋಗಿಗಳ ಸಹಕಾರ ಮುಖ್ಯ ಕಾರಣ. ವಿದ್ಯಾರ್ಥಿಗಳಿಗೆ ಅತ್ಯುತ್ತಮ ಶಿಕ್ಷಣ ಹಾಗೂ ಉದ್ಯೋಗ ಕಲ್ಪಿಸುವುದು ಮತ್ತು ಶಾಂತಿ, ಸೌಹಾರ್ದ, ಸಹೋದರತ್ವದ ಸಮಾಜ ನಿರ್ಮಾಣಕ್ಕೆ ಶ್ರಮಿಸುವುದು ನನ್ನ ಸಂಕಲ್ಪ' ಎಂದು ತಿಳಿಸಿದರು.ಪಟ್ಟಣದ ಹಲವಾರು ಗಣ್ಯರು, ಸಂಘ ಸಂಸ್ಥೆಗಳ ಮುಖಂಡರು, ಸರ್ಕಾರಿ ನೌಕರರ ಸಂಘ ಹಾಗೂ ಮುಸ್ಲಿಂ ನೌಕರರ ಸಂಘದ ಪದಾಧಿಕಾರಿಗಳು, ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಸೈಯದ್ ಮಿನಾಜುಲ್ ಹಸನ್ ಅವರನ್ನು ಸನ್ಮಾನಿಸಿ ಅಭಿನಂದಿಸಿದರು.ಕಾರ್ಯಕ್ರಮದಲ್ಲಿ ಸೈಯದ್ ಮಿನಾಜುಲ್ ಹಸನ್ ಅವರ ಶಿಕ್ಷಣ ಮತ್ತು ವೃತ್ತಿ ಬದುಕಿನ ಮಹತ್ವದ ಸಾಧನೆಗಳ ಕಿರುಚಿತ್ರ ಪ್ರದರ್ಶಿಸಲಾಯಿತು. ಶಿಕ್ಷಕ ಅಬ್ದುಲ್ ಯೂನುಸ್ ಅಭಿನಂದನಾ ಭಾಷಣ ಮಾಡಿದರು.

ಹಿರಿಯ ವಕೀಲ ಸೈಯದ್ ತನ್ವೀರುಲ್ ಹಸನ್ ಕಾರ್ಯಕ್ರಮ ಉದ್ಘಾಟಿಸಿದರು. ಯುವ ಮುಖಂಡ ಮಹಮ್ಮದ್ ಬೇಗ್ ಸಂವಿಧಾನ ಪೀಠಿಕೆ ಬೋಧಿಸಿದರು. ಹಸನ್ ಕುಟುಂಬದ ಸದಸ್ಯರಾದ ಸೈಯದ್ ಶಮಶೀರುಲ್ ಹಸನ್, ಸೈಯದ್ ಸರ್ಫರಾಜುಲ್ ಹಸನ್, ಶೇಖ್ ಅಲಿ ಮತ್ತಿತರರು ಉಪಸ್ಥಿತರಿದ್ದರು.ಎಂ.ಎ.ಎಚ್.ಮುಖೀಮ್ ಪ್ರಾಸ್ತಾವಿಕ ಭಾಷಣ ಮಾಡಿದರು. ಶಿಕ್ಷಕ ಅಜಗರ್ ಅಲಿ ನಿರೂಪಿಸಿದರು. ಉಪನ್ಯಾಸಕ ಮಹಿಬೂಬ್ ಮದ್ಲಾಪುರ ಸ್ವಾಗತಿಸಿದರು ಪ್ರಾಧ್ಯಾಪಕ ಸೈಯದ್ ಮುಜೀಬ್ ಅಹ್ಮದ್ ವಂದಿಸಿದರು.

## ಬಾಣಂತಿಯರ ಸರಣಿ ಸಾವು ಪ್ರಕರಣ, ಸಂತ್ರಸ್ತ ಕುಟುಂಬಗಳಿಗೆ 25 ಲಕ್ಷ ರೂ. ಪರಿಹಾರಕ್ಕೆ ಆಗ್ರಹ

ನಾಲ್ವರು ಬಾಣಂತಿಯರು ಮೃತಪಟ್ಟು, ನವಜಾತ ಶಿಶುಗಳು ತಾಯಿಯನ್ನು ಕಳೆದುಕೊಂಡ ಅನಾಥವಾಗಿವೆ. ಇದರಿಂದ ಈ ಮಹಿಳೆಯರ ಕುಟುಂಬಗಳು ಕಣ್ಣೀರಿನಲ್ಲಿ ಕೈತೊಳೆಯುತ್ತಿವೆ. ಸಿಎಂ, ಆರೋಗ್ಯ ಇಲಾಖೆ ಸಚಿವರು, ಜಿಲ್ಲಾ ಉಸ್ತುವಾರಿ ಸಚಿವರು ಸೇರಿದಂತೆ ಸಂಬಂಧಿಸಿದ ಇಲಾಖೆಯ ಪ್ರಮುಖ ಅಧಿಕಾರಿಗಳಿಗೆ ಮನವಿ ಸಲ್ಲಿಸಿ ವರ್ಷ ಗತಿಸಿದರೂ ಇಲ್ಲಿಯವರೆಗೂ ಈ ಕುಟುಂಬಗಳಿಗೆ ಪರಿಹಾರ ನೀಡಿರುವುದಿಲ್ಲ." ಎಂದು ಮನವಿಯಲ್ಲಿ ಪ್ರಸ್ತಾಪಿಸಿ ಗಮನ ಸೆಳೆದಿದ್ದಾರೆ.

'25 ಲಕ್ಷ ಪರಿಹಾರ ಕೊಡಿ'

"ಸಿಂಧನೂರು ತಾಲೂಕು ಸಾರ್ವಜನಿಕ ಆಸ್ಪತ್ರೆಯಲ್ಲಿ ಹೆರಿಗೆಯಾದ ನಂತರ ಅಸ್ವಸ್ಥಗೊಂಡು ಆರ್.ಎಚ್.ಕ್ಯಾಂಪ್ 3ರ ಮೌಸಂಬಿ ಮಂಡಲ್, ರಾಗಲಪರ್ವಿಯ ಚನ್ನಮ್ಮ, ಉದ್ಬಾಳ.ಜೆ ಗ್ರಾಮದ ಚಂದ್ರಕಲಾ ಹಾಗೂ ಅಂಕುಶದೊಡ್ಡಿಯ ರೇಣುಕಮ್ಮ ನಾಲ್ವರು ಬಾಣಂತಿಯರು ಮೃತಪಟ್ಟಿದ್ದು ಈ ನಾಲ್ವರು ಮಹಿಳೆಯರ ಕುಟುಂಬಗಳಿಗೆ 25 ಲಕ್ಷ ಪರಿಹಾರ ಒದಗಿಸಬೇಕು., ಮಹಿಳೆಯರು ಮೃತರಾಗಿದ್ದರಿಂದ ಅನಾಥವಾಗಿರುವ ನಾಲ್ಕು ಮಕ್ಕಳ ಪೋಷಣೆಯ ಜವಾಬ್ದಾರಿಯನ್ನು ಸರ್ಕಾರವೇ ಹೊತ್ತುಕೊಳ್ಳಬೇಕು, ಹೆರಿಗೆಯಾದ ನಂತರ ಬಾಣಂತಿಯರ ಸಾವಿನ ಘಟನೆಗಳು ಮರುಕಳಿಸದಂತೆ ಎಚ್ಚರಿಕೆ ವಹಿಸಬೇಕು, ಸಿಂಧನೂರು ನಗರದ ಪಿಡಬ್ಲ್ಯು ಡಿ ಕ್ಯಾಂಪಿನಲ್ಲಿ ಇತ್ತೀಚೆಗೆ ಆರಂಭವಾಗಿರುವ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ಅಗತ್ಯ ವೈದ್ಯರು, ಸಿಬ್ಬಂದಿ ಕೊರತೆ ಇದ್ದು, ಕೂಡಲೇ ನೇಮಕ ಮಾಡಬೇಕು, ಕೆಲಸದ ಅವಧಿಯಲ್ಲಿ ಬೇರೆ ಕಡೆ ಖಾಸಗಿ ಕ್ಲಿನಿಕ್ ನಡೆಸುವ ವೈದ್ಯರ ಮೇಲೆ ಶಿಸ್ತುಕ್ರಮ ಜರುಗಿಸಬೇಕು" ಎಂಬ ಬೇಡಿಕೆಗಳುಳ್ಳ ಮನವಿಪತ್ರವನ್ನು ಅಧ್ಯಕ್ಷರಿಗೆ ಸಲ್ಲಿಸಿರುವುದಾಗಿ ಮಂಜುನಾಥ ಗಾಣಗೇರ ತಿಳಿಸಿದ್ದಾರೆ.

## ಮಹಾಮೇಳಾವ ನಡೆಸಲು ಯತ್ನಿಸಿದ ಎಂಇಎಸ್ ವಿರುದ್ಧ ಕರವೇ ಆಕ್ರೋಶ

**ಬೆಳಗಾವಿ,ಡಿ.8–** ಕರ್ನಾಟಕ ಸರಕಾರದ ವಿರುದ್ಧ ಮಹಾಮೇಳಾವ ನಡೆಸಲು ಯತ್ನಿಸಿದ ಎಂಇಎಸ್ ವಿರುದ್ಧ ಕರ್ನಾಟಕ ರಕ್ಷಣಾ ವೇದಿಕೆ(ಕರವೇ) ನಗರದಲ್ಲಿ ತೀವ್ರ ಪ್ರತಿಭಟನೆ ನಡೆಸಿತು. ಈ ವೇಳೆ ಮಾತನಾಡಿದ ಜಿಲ್ಲಾಧ್ಯಕ್ಷ ದೀಪಕ ಗುಡಗನಟ್ಟಿ ಅವರು, ಮರಾಠಾ ಏಕೀಕರಣ ಸಮಿತಿಯ ಎಲ್ಲ ಚಟುವಟಿಕೆಗಳನ್ನು ಜಿಲ್ಲಾಡಳಿತ ಹತ್ತಿಕ್ಕಬೇಕು.

ಎಂಇಎಸ್ ಮುಖಂಡರನ್ನು ಜಿಲ್ಲೆಯಿಂದ ಗಡಿಪಾರು ಮಾಡಬೇಕು ಎಂದು ಸರಕಾರಕ್ಕೆಆಗ್ರಹಿಸಿದರು. ಎಂಇಎಸ್ ರ್‍ಯಾಲಿ ನಡೆಸಲು ಉದ್ದೇಶಿಸಿದ್ದ ಟಿಳಕವಾಡಿ ಪ್ರದೇಶದತ್ತ ಹೋಗಲು ಯತ್ನಿಸಿದ ಕರವೇ ಕಾರ್ಯಕರನ್ನು ನಗರ ಪೊಲೀಸರು ಬಂಧಿಸಿ ಎಪಿಎಂಸಿ ಠಾಣೆಯತ್ತ ಕರೆದೊಯ್ದರು.

ಬೆಳಗಾವಿ ನಗರದಲ್ಲಿ ದಶಕಗಳಿಂದ ಕಿತಾಪತಿ ಹಾಗೂ ಅಶಾಂತಿ ಉಂಟು ಮಾಡಿ ಕರ್ನಾಟಕ ಮತ್ತು ಮಹಾರಾಷ್ಟ್ರ ನಡುವೆ ಇಲ್ಲದ ದ್ವೇಷ ಉಂಟು ಮಾಡುವ ಸೀಮಿತ ಪುಂಡರ ಹಾವಳಿ ಬೆಳಗವಾಗಿಯಲ್ಲಿ ಹೆಚ್ಚಾಗಿದ್ದು, ಸರಕಾರ ಸೂಕ್ತ ನಿರ್ಧಾರ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಈ ವೇಳೆ ದೀಪಕ್ ಗುಡಗನಟ್ಟಿ, ವಾಜೀದ್ ಹಿರೇಕೋಡಿ ಹಾಗೂ ಇತರ ನಾಯಕರನ್ನು ಪೊಲೀಸರು ವಶಕ್ಕೆ ಪಡೆದರು.

## ಡಾ. ಚನ್ನಬಸಯ್ಯಸ್ವಾಮಿ ಹಿರೇಮಠ ಅವರಿಗೆ ಕರುನಾಡ ಅನಾಥ ರಕ್ಷಕ" ಪ್ರಶಸ್ತಿ ಪ್ರದಾನ'

ಯುವಮಾರ್ಗ ಸುದ್ದಿ



**ಬೆಂಗಳೂರು,ಡಿ.8–**ಬೆಟ್ಟ ಹಲಸೂರಿನಲ್ಲಿರುವ ಹಸಿರೇ ಉಸಿರು ಟ್ರಸ್ಟ್ ಆಯೋಜಿಸಿದ್ದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಮಾನವೀಯ ಸೇವೆಯನ್ನು ಪ್ರತಿಬಿಂಬಿಸುವ ವಿಶೇಷ ಗೌರವ ವಿತರಣೆ ಕಾರ್ಯಕ್ರಮ ಜರುಗಿತು.

ರಾಯಚೂರು ಜಿಲ್ಲೆಯ ಸಿಂಧನೂರಿನ ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸಯ್ಯಸ್ವಾಮಿ ಹಿರೇಮಠ ಅವರಿಗೆ "ಕರುನಾಡ ಅನಾಥ ರಕ್ಷಕ" ಎಂಬ ಶ್ರೇಷ್ಠ ಪ್ರಶಸ್ತಿ ಪ್ರದಾನ ಮಾಡಿ ವಿಶೇಷವಾಗಿ ಗೌರವಿಸಲಾಯಿತು.

ಅಶಕ್ತರು, ಅನಾಥರು, ವಯಸ್ಕರು ಮತ್ತು ಬುದ್ಧಿಮಾಂದ್ಯರಿಗೆ ದೀರ್ಘಕಾಲದಿಂದ ಸೇವೆ ಸಲ್ಲಿಸುತ್ತಿರುವ ಡಾ. ಹಿರೇಮಠ ಅವರ ಸಂಘಟನೆಯ ಸಾಮಾಜಿಕ ಬದ್ಧತೆ ಹಾಗೂ ಮಾನವೀಯ ಸೇವೆಗೆ ಈ ಗೌರವ ಲಭಿಸಿದೆ. ಕಾರ್ಯಕ್ರಮದಲ್ಲಿ ಟ್ರಸ್ಟ್‌ನ ಪದಾಧಿಕಾರಿಗಳು, ಗಣ್ಯರು ಹಾಗೂ ಸಾಂಸ್ಕೃತಿಕ ಕ್ಷೇತ್ರದ ಪ್ರತಿಷ್ಠಿತರು ಪಾಲ್ಗೊಂಡು ಅಭಿನಂದಿಸಿದರು.

## ಅಂತರ್ ವಿಶ್ವವಿದ್ಯಾಲಯ ಪುರುಷರ ವಾಲಿಬಾಲ್ ಕ್ರೀಡಾಕೂಟಕ್ಕೆ ಡಿಗ್ರಿ ಕಾಲೇಜಿನ ವಿದ್ಯಾರ್ಥಿಗಳು ಆಯ್ಕೆ

ಯುವಮಾರ್ಗ ಸುದ್ದಿ



**ಸಿಂಧನೂರು,ಡಿ.8–**ಡಿಸೆಂಬರ್ 10 ರಿಂದ 14 ರವರೆಗೆ ಜೆಎನ್‌ಟಿಯು ವಿಶ್ವವಿದ್ಯಾಲಯ, ಕಾಕಿನಾಡ ಆಂಧ್ರ ಪ್ರದೇಶದಲ್ಲಿ ನಡೆಯುವ ದಕ್ಷಿಣ ಭಾರತ ಅಂತರ್ ವಿಶ್ವವಿದ್ಯಾಲಯ ಪುರುಷರ ವಾಲಿಬಾಲ್ ಕ್ರೀಡಾಕೂ ಟಕ್ಕೆ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ ತಂಡಕ್ಕೆ ನಗರದ ಸರ್ಕಾರಿ ಡಿಗ್ರಿ ಕಾಲೇಜಿನ ಬಿಎ 5 ನೇ ಸೆಮಿಸ್ಟರ್ ವಿದ್ಯಾರ್ಥಿ ಕುಮಾರ್ ಅಮೀನ್ ಸಾಬ್ ತಂ.ಖಾದರ್ ಸಾಬ್, ಬಿಎ ಪ್ರಥಮ ಸೆಮಿಸ್ಟರ್ ವಿದ್ಯಾರ್ಥಿ ಕುವಾರ್ ತಿಮ್ಮಣ್ಣ ತಂ.ಪರಮಣ್ಣ ಆಯ್ಕೆಯಾಗಿದ್ದಾರೆಂದು ಕಾಲೇಜಿನ ಪ್ರಾಂಶು ಪಾಲರಾದ ಪ್ರೊ.ಪಾಂಡು ಹೇಳಿದರು.

ಆದಿಕವಿ ಶ್ರೀಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ ತಂಡವನ್ನು ಪ್ರತಿ ನಿಧಿಸಿ ನಮ್ಮ ಕಾಲೇಜಿಗೂ ಹಾ ಗೂ ತಾಲೂಕಿಗೂ ಕೀರ್ತಿ ತಂದಿ ದ್ದಾರೆ. ಇವರಿಗೆ ಕಾಲೇಜಿನ ಅಭಿವೃ ದ್ಧಿ ಸಮಿತಿಯ ಅಧ್ಯಕ್ಷರು, ಸದಸ್ಯ ರು, ಬೋಧಕ ಮತ್ತು ಬೋಧಕೇತ ರ ಸಿಬ್ಬಂದಿಗಳು, ಪ್ರಾಚಾರ್ಯರು, ವಿದ್ಯಾರ್ಥಿ ಬಳಗ ಇವರಿಗೆ ಹೃದಯಪೂರ್ವಕ ಅಭಿನಂದನೆಗಳನ್ನು ಸಲ್ಲಿಸಿದರು.

ಈ ಸಂದರ್ಭದಲ್ಲಿ ಕಾಲೇಜಿನ ಹಿರಿಯ ಪ್ರಾಧ್ಯಾಪಕ ಪ್ರೊ.ಜಾಜಿ ದೇವೇಂದ್ರಪ್ಪ, ಪ್ರೊ.ಪುಷ್ಪ, ಪ್ರೊ.ಹಿಷರತ ಬೇಗಂ, ಪತ್ರಾಂಕಿತ ವ್ಯವಸ್ಥಾಪಕರಾದ ಮೊಹಮ್ಮದ್ ಸಿದ್ದಿಕಿ, ಸಹಾಯಕ ಪ್ರಾಧ್ಯಾಪಕ ಜಯಶ್ರೀ ಪಾಟೀಲ್, ಉಪನ್ಯಾಸಕರಾದ ರಾಜೇಶ ಎಂ, ದೈಹಿಕ ಶಿಕ್ಷಣ ವಿಭಾಗದ ಸಂಯೋಜಕ ಡಾ.ಲವಕುಮಾರ್ ಹಾಗೂ ದೈಹಿಕ ಶಿಕ್ಷಣ ನಿರ್ದೇಶಕ ಶಿವ.ಕೆ, ಸೇರಿದಂತೆ ಸಿಬ್ಬಂದಿ ವರ್ಗದವರಿದ್ದರು.

## ಹಳೆ ವೈಷಮ್ಯ: ಮಾರಕಾಸ್ತ್ರಗಳಿಂದ ಹೊಡೆದು ವ್ಯಕ್ತಿ ಕೊಲೆ



**ಕಲಬುರಗಿ,ಡಿ.8–**ಹಳೆ ವೈಷಮ್ಯದಿಂದ ವ್ಯಕ್ತಿಯೋರ್ವರನ್ನು ಮಾರಕಾಸ್ತ್ರಗಳಿಂದ ಹೊಡೆದು ಕೊಲೆ ಮಾಡಿರುವ ಘಟನೆ ಕಮಲಾಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಶನಿವಾರ ರಾತ್ರಿ ನಡೆದಿದೆ.

ಕಮಲಾಪುರ ಪಟ್ಟಣದ ನಿವಾಸಿ ಮುಹಮ್ಮದ್ ಹನೀಫ್ (65) ಕೊಲೆಯಾದವರು.ಅದೇ ಗ್ರಾಮದ ರಿಝ್ವಾನ್(25) ಎಂಬಾತ ಕೊಲೆ ಕೃತ್ಯ ನಡೆಸಿರುವುದಾಗಿ ತಿಳಿದುಬಂದಿದೆ.

ಈ ಹಿಂದೆ ರಿಝ್ವಾನ್ ಹಾಗೂ ಮೃತ ಹನೀಫ್ ನಡುವೆ ಜಗಳವಾಗಿತ್ತು. ಇದೇ ಕಾರಣಕ್ಕೆ ಹಳೆ ವೈಷಮ್ಯ ಇಟ್ಟುಕೊಂಡು ಕಮಲಾಪುರದ ಜೇವಣಗಿ ರಸ್ತೆಯ ಕೆಇಬಿ ಕಚೇರಿ ಬಳಿ ಹನೀಫ್ ಅವರನ್ನು ರಿಝ್ವಾನ್ ಕೊಲೆ ಮಾಡಿದ್ದಾನೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

ಸ್ಥಳಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸಲು, ಸ್ಥಳೀಯ ಪೊಲೀಸ್ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.ಈ ಬಗ್ಗೆ ಕಮಲಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

## ಗಮನಸೆಳೆದ ಅಪ್ಪಾಜಿ ಗುರುಕುಲ ಶಾಲೆಯ ವಿಜ್ಞಾನ ಮತ್ತು ಜನಪದ ವಸ್ತು ಪ್ರದರ್ಶನ



**ಕಲಬುರಗಿ,ಡಿ.8–** ನಗರದ ಅಪ್ಪಾಜಿ ಗುರುಕುಲ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಆಯೋಜಿಸಿದ್ದ ವಿಜ್ಞಾನ ಮತ್ತು ಜನಪದ ವಸ್ತು ಪ್ರದರ್ಶನ ಕಾರ್ಯಕ್ರಮಕ್ಕೆ ಶಾಸಕರಾದ ಅಲ್ಲಮಪ್ರಭು ಪಾಟೀಲ್ ಅವರು ಚಾಲನೆ ನೀಡಿದರುಅವರು. ಮಕ್ಕಳು ಸರ್ವಾಗಿನ ಅಭಿವೃದ್ಧಿ ಸಾಧಿಸಬೇಕಾದರೆ ವಿಜ್ಞಾನ ವಸ್ತು ಪ್ರದರ್ಶನ ಮತ್ತು ಜನಪದ ಕಲೆ ಸಂಸ್ಕೃತಿ ಉಳಿಸಿ ಬೆಳೆಸಲು ಇಂತಹ ಪ್ರದರ್ಶನಗಳು ಸಹಕಾರಿಯಾಗಿದ್ದು, ಜಿಲ್ಲೆಯಲ್ಲಿ ಅಪ್ಪಾಜಿ ಗುರುಕುಲ ಶಾಲೆ ನಡೆಸುವ ಇಂತಹ ವಿಶೇಷ ಕಾರ್ಯಕ್ರಮಗಳು ಮಾದರಿಯಾಗಿದೆ ಎಂದರು.

ಇಂತಹ ಕಾರ್ಯಕ್ರಮಗಳು ನಿರಂತರವಾಗಿ ನಡೆಸಲು ಶಾಲಾ ಆಡಳಿತ ಮಂಡಳಿಗೆ ವಿದ್ಯಾರ್ಥಿಗಳು ಪಾಲಕ ಪೋಷಕರು ಪ್ರೋತ್ಸಾಹ ನೀಡಬೇಕು ಇದರಿಂದ ಶಾಲೆಗೆ ಹಾಗೂ ವಿದ್ಯಾರ್ಥಿಗಳಿಗೆ ಕಿರ್ತಿ ಬರುತ್ತದೆ ಎಂದು ಸಲಹೆ ನೀಡಿದರು. ಕಾರ್ಯಕ್ರಮದ ಸಾನಿಧ್ಯ ವಹಿಸಿದ ಶ್ರೀನಿವಾಸ್ ಸರಡಗಿ ಪೂಜ್ಯ ರೇವಣಸಿದ್ಧ ಶಿವಾಚಾರ್ಯರು ಮಾತನಾಡಿ. ಮಕ್ಕಳಿಗೆ ಕಲಿಕೆ ಕಲಿಕಾ ಜೊತೆಗೆ ಪಠ್ಯೇತರ ಚಟುವಟಿಕೆಗಳು ಮಾಡಿಸುವುದು ತುಂಬಾ ಅವಶ್ಯಕವಾಗಿದೆ. ಈ ಶಾಲೆ ಎಲ್ಲಾ ವಿದ್ಯಾರ್ಥಿಗಳಿಗೆ ಮಾದರಿಯಾಗಿದೆ ಎಂದರು.

ನಂತರ ಜೆಸ್ಕಾಂನ ಅಧ್ಯಕ್ಷರಾಗಿರ್ತಕ್ಕಂತ ಪ್ರವೀಣ್ ಪಾಟೀಲ್ ಹರವಾಳ ಅವರು ಮಾತನಾಡಿ. ಮಕ್ಕಳು ಚಿಗುರುವಾಗಲೇ ಬೆಳೆಸಬೇಕು ಮಕ್ಕಳು ಕೆಸರು ಮುದ್ದೆ ಇದ್ದಂತೆ. ಶಿಕ್ಷಕರು ಪಾಲಕರು ಯಾವ ರೀತಿ ಅದನ್ನು ಬೆಳೆಸುತ್ತೇವೆ ಹಾಗೆ ಬೆಳೆಯುತ್ತದೆ ಎಂದು ತಮ್ಮ ಅಭಿಪ್ರಾಯಸಿದರು. ಸಂಸ್ಥೆಯ ಸಂಸ್ಥಾಪಕ ಕಾರ್ಯದರ್ಶಿ ರಾಜಕುಮಾರ್ ಬಿ ಉದನೂರವರು ಸ್ವಾಗತ ಪ್ರಾಸ್ತಾವಿಕವಾಗಿ ಮಾತನಾಡಿದರು.ಇದೇ ಸಂದರ್ಭದಲ್ಲಿ ಯುನೈಟೆಡ್ ಆಸ್ಪತ್ರೆ ವತಿಯಿಂದ ಹಾಗೂ ಶ್ರೀ ಸಿದ್ಧರಾಮೇಶ್ವರ ಕಣ್ಣಿನ ಆಸ್ಪತ್ರೆ ವತಿಯಿಂದ ಆರೋಗ್ಯ ತಪಾಸಣೆ ಮತ್ತು ಕಣ್ಣಿನ ತಪಾಸಣೆ ನಡೆಯಿತು ಸುಮಾರು 500ಕ್ಕೂ ಹೆಚ್ಚು ವಿದ್ಯಾರ್ಥಿಗಳು ಮತ್ತು ಪಾಲಕರು ಆರೋಗ್ಯ ತಪಾಸಣೆ ಮತ್ತು ನೇತ್ರ ತಪಾಸಣೆ ಮಾಡಲಾಯಿತು

ಈ ಸಂದರ್ಭದಲ್ಲಿ ನಡೆದ ಮಕ್ಕಳಿಂದ ವಿಜ್ಞಾನ ಮತ್ತು ಜನಪದ ವಸ್ತು ಪ್ರದರ್ಶನ ಹಾಗೂ ವೇಷ ಭೂಷಣವನ್ನು ನೋಡಿ ಪಾಲಕ ಪೋಷಕರು ಅತಿಥಿ ಮಾನ್ಯರು ಕಣ್ಣು ತುಂಬಿಕೊಂಡು ಸಂತೋಷ ವ್ಯಕ್ತಪಡಿಸಿದರು. ಕಾರ್ಯಕ್ರಮದ ನಿರೂಪಣೆಯನ್ನು 9ನೇ ತರಗತಿ ವಿದ್ಯಾರ್ಥಿನಿ ಅರ್ಚನ ಅವರು ನಡೆಸಿಕೊಟ್ಟರು ಅಕ್ಷರ ಸೌಂದರ್ಯ ಶಾಂಭವಿ ಅವರಿಂದ ಪ್ರಾರ್ಥನೆ ಗೀತೆ ಹಾಡಲಾಯಿತು. ಕುಮಾರಿ ಶಂಭಾವಿಯವರು ಕಾರ್ಯಕ್ರಮದ ವಂದನಾರ್ಪಣೆ ನಡೆಸಿಕೊಟ್ಟರು ಸರ್ಕಾರಿ ನೌಕರ ಸಂಘದ ಉಪಾಧ್ಯಕ್ಷ ಶರಣರಾಜ್ ಚಪ್ಪರಬಂದಿ. ಡಾ. ಸಿದ್ದಲಿಂಗ ರೆಡ್ಡಿ ಡಾ. ವಿಜಯ ಪಾಟೀಲ್ ಸಂಸ್ಥೆಯ ಅಧ್ಯಕ್ಷರಾದ ಶ್ರೀಮತಿ ಭಾಗವ್ಮ್ಮ ರಾಜಕುವಾರ್ ಸೇರಿದಂತೆ. ಅಭಿಲಾಶ ಸೇರಿದಂತೆಸಾವಿತ್ರಿ, ಅರ್ಚನಾ, ಭಾಗ್ಯಶ್ರೀ, ಅಶ್ವಿನಿ, ದೀಪಾಲಿ, ಶಾಂತಾ, ಲತಾ, ವೈಷ್ಣವಿ, ರಾಹುಲ್, ಶಶಿಕಲಾ,. ಸೇರಿದಂತೆ ಹಲವರು ಇದ್ದರು.

# ಮೌನ ಸಾಧನೆ



ಮೌನವಾಗಿಯೇ ಉಳಿದು ತಮ್ಮ ವಿರೋಧಿಗಳ ಬಾಯಿ ಮುಚ್ಚಿಸುವಲ್ಲಿ ಆಪಲ್ ಜನಕ ಸ್ಟೀವ್ ಜಾಬ್ಸ್ ಅದ್ವಿತೀಯರಾಗಿದ್ದರು.

1997ರ ಅವಧಿಯಲ್ಲಿ ಇನ್ನೇನು ಕೆಲವೇ ದಿನಗಳಲ್ಲಿ ದಿವಾಳಿಯಾಗುತ್ತೇವೆ ಎಂಬ ಭಯ ಇದ್ದಾಗ ಸ್ಟಾಕ್ ಮಾರ್ಕೆಟ್ ನಲ್ಲಿ ಆಪಲ್ ನ ಷೇರುಗಳು ಅತ್ಯಂತ ವೇಗದಲ್ಲಿ ಇಳಿಮುಖ ಪಯಣವನ್ನು ಆರಂಭಿಸಿತ್ತು. ಉದ್ಯೋಗಿಗಳು ಕೆಲಸವನ್ನು ಬಿಡತೊಡಗಿದ್ದರು. ಆಪಲ್ ನೆಲಕಚ್ಚುತ್ತದೆ ಎಂಬುದು ನಿಶ್ಚಿತವಾಗಿತ್ತು. ಆ ಹೊತ್ತಿನಲ್ಲಿ ಆಪಲ್ ನ ಕಾರ್ಯನಿರ್ವಾಹಕ ಅದೇ ಸದಸ್ಯರ ಬೋರ್ಡ್ ಗೆ ಸ್ಟೀವ್ ಜಾಬ್ಸ್ ರನ್ನು ಮತ್ತೆ ಮರಳಿ ಕರೆತರಲಾಗಿತ್ತು.

ಹಾಗೆ ಮರಳಿದ ಸ್ಟೀವ್ ಜಾಬ್ಸ್ ಮೊದಲ ಕಾರ್ಯವೇ ಎಲ್ಲರನ್ನೂ ನಡುಗಿಸಿತ್ತು. ಉತ್ಪನ್ನದ ತಂತ್ರಗಾರಿಕೆಯ ಕುರಿತ ಮೀಟಿಂಗ್ ನಲ್ಲಿ ಆತ ತನ್ನ ಎದುರಿಗಿದ್ದ ಅತಿ ಉದ್ದದ ಟೇಬಲ್ ನ ಮೇಲೆ ಸಾಲಾಗಿ ಉಪಯೋಗಿಸಲಾಗಿದ್ದ ಕಂಪ್ಯೂಟರ್ ಗಳು, ಪ್ರಿಂಟರ್ಗಳು ಮತ್ತು ಇತರ ಎಲೆಕ್ಟ್ರಾನಿಕ್ ಗ್ಯಾಜೆಟ್ ಗಳನ್ನು ತೀಕ್ಷ್ಣವಾಗಿ ನೋಡಿದ. ಬಹಳ ಹೊತ್ತಿನವರೆಗೆ ಹಾಗೆ ಆ ವಸ್ತುಗಳನ್ನು ನೋಡುತ್ತಾ ಸುಮ್ಮನೆ ಕುಳಿತ ಆತ ನಂತರ ತುಸು ಕೆಮ್ಮಿ ತನ್ನ ದನಿಯನ್ನು ಸರಿಪಡಿಸಿಕೊಂಡ.

ಆತನ ಕೆಮ್ಮುವಿಕೆಯನ್ನು ಕೇಳಿದ ಉಳಿದೆಲ್ಲ ಸದಸ್ಯರು ತಮ್ಮ ತಮ್ಮ ಸೀಟುಗಳಲ್ಲಿ ಸರಿಯಾಗಿ ಕುಳಿತುಕೊಂಡರು.ಅಂತಿಮವಾಗಿ ಸ್ಟೀವ್ ಅತ್ಯಂತ ಶಾಂತವಾದ ಸ್ವರದಲ್ಲಿ

ನಾವು ಒಟ್ಟಾಗಿ ನಾಲ್ಕು ಉತ್ಪನ್ನಗಳನ್ನು ತಯಾರಿಸುತಿದ್ದೇವೆ. ಆ ನಾಲ್ಕು ಉತ್ಪನ್ನಗಳು ಅತ್ಯಂತ ಉತ್ಕೃಷ್ಟವಾಗಿವೆ ಎಂಬುದು ನಿಜ ಎಲ್ಲವೂ ಸರಿಯೇ ಆದರೆ ಅವೆಲ್ಲವನ್ನು ಬಿಟ್ಟುಬಿಡಿ ಎಂದು ನುಡಿದ. ಸಭೆಯಲ್ಲಿದ್ದ ಇಂಜಿನಿಯರಗಳು ಭಯದಿಂದ ನಡುಗಿದರು.ಮಾರುಕಟ್ಟೆ ಹೂಡಿಕೆದಾರರು ತೀವ್ರವಾಗಿ ವಿರೋಧಿಸಿದರು. ಇಡೀ ನಾಲ್ಕು ಉತ್ಪನ್ನಗಳ ಜವಾಬ್ದಾರಿಯನ್ನು ಹೊತ್ತು ನಾಲ್ಕು ಡಿಪಾರ್ಟ್ಮೆಂಟ್ ಗಳ ಸದಸ್ಯರು ತಮ್ಮ ಎಲ್ಲಾ ಉತ್ಪನ್ನಗಳ ಉಳಿಯುವಿಕೆಗಾಗಿ ಆತನನ್ನು ಬೇಡಿಕೊಂಡರು. ಊಹೂಂ ಜಾಬ್ಸ್ ಇದಾವುದನ್ನು ಒಪ್ಪಲಿಲ್ಲ.

ತನ್ನ ಎದುರಿಗಿನ ಟೇಬಲ್ ಮೇಲಿರುವ ಎಲ್ಲ ಒಪ್ಪಂದಗಳನ್ನು ಆತ ಒಂದೊಂದಾಗಿ ತೆರವುಗೊಳಿಸಲು ಆದೇಶ ನೀಡಿದ. ಅಂತಿಮವಾಗಿ ಟೇಬಲ್ ನ ಮೇಲಿದ್ದ ಆಪಲ್ ನ ಪ್ರತಿಯೊಂದು ಉತ್ಪನ್ನಗಳು ಟೇಬಲ್ ಮೇಲಿಂದ ತಳ್ಳಲ್ಪಟ್ಟವು ಅದರ ಜೊತೆಜೊತೆಗೆ ಅದುವರಿಗೆ ಅವರು ಅನುಭವಿಸಿದ ಎಲ್ಲಾ ತೊಡಕುಗಳು ಮತ್ತು ವ್ಯಾಕುಲತೆಗಳು ಕೂಡ ಹೊರ ದಬ್ಬಲ್ಪಟ್ಟವು.

ಒಂದು ಬಾರಿ ಇಡೀ ಟೇಬಲ್ ತೆರವುಗೊಂಡು ಖಾಲಿ ಟೇಬಲ್ ಅನ್ನು ತೋರಿಸಿ ಆತ ಹೀಗೆ ನಾವು ಗೆದ್ದಿದ್ದೆವು ಮತ್ತು ಮುಂದೆ ಕೂಡ ಹೀಗೆಯೇ ಗೆಲ್ಲುತ್ತೇವೆ ಎಂದು ಹೇಳಿದ

ಮುಂದೆ ಅದೇ ಖಾಲಿ ಟೇಬಲ್ ನ ಮೇಲೆ ಐಮ್ಯಾಕ್, ಐ ಪ್ಯಾಡ್, ಐಫೋನ್ ಮತ್ತು ಐ ಪಾಡ್ ಗಳು ಸೃಷ್ಟಿಯಾಗಿ ಬಂದು ಕುಳಿತವು. ಗ್ರಾಹಕರ ಇತಿಹಾಸದಲ್ಲಿಯೇ ಅತ್ಯಂತ ಹೆಚ್ಚು ಲಾಭದಾಯಕವಾದ ಉತ್ಪನ್ನವಾಗಿ ಮಾರುಕಟ್ಟೆಯನ್ನು ಆಕ್ರಮಿಸಿದ ಈ ಉತ್ಪನ್ನಗಳು ಇತಿಹಾಸವನ್ನು ಸೃಷ್ಟಿಸಿದವು

ಆಪಲ್ ಕಂಪನಿಯು ಕೂಡಿಸುವುದರಿಂದ ಬೆಳೆಯಲಿಲ್ಲ ಬದಲಾಗಿ ಕಳೆಯುವುದರಿಂದ ಹೆಚ್ಚು ಬೆಳವಣಿಗೆಯನ್ನು ಕಂಡಿತು.

ಆಪಲ್ ಕಂಪನಿಯ ಬೆಳವಣಿಗೆಯಲ್ಲಿ ನಮಗೆ ಮಾರುಕಟ್ಟೆ ತಂತ್ರಜ್ಞಾನದ ಕುರಿತ ಪಾಠ ದೊರೆಯುತ್ತದೆ

ವಿಪರೀತ ಸಂಕೀರ್ಣತೆಗಳು ಮಾರಾಟವನ್ನು ಕಡಿಮೆಗೊಳಿಸುತ್ತವೆ. ಸ್ಪಷ್ಟತೆ ಪ್ರಭುತ್ವವನ್ನು ಸಾಧಿಸುತ್ತದೆ.

ಬಹುತೇಕ ಜನರು ಮಾರುಕಟ್ಟೆಯಲ್ಲಿ ಕಡೆಗಣಿಸುವ ಕೆಲ ವಿಷಯಗಳನ್ನು ಸ್ಟೀವ್ ಜಾಬ್ಸ್ ಗುರುತಿಸಿದ್ದರು.

ಗ್ರಾಹಕರು ಅತ್ಯುತ್ತಮವಾದ ಉತ್ಪನ್ನಗಳನ್ನು ಖರೀದಿಸುವುದಕ್ಕಿಂತ ಸ್ಪಷ್ಟವಾಗಿ ಬಳಸಲು ಅನುಕೂಲವಾಗುವ ಉತ್ಪನ್ನಗಳನ್ನು ಖರೀದಿಸುತ್ತಾರೆ

ಸಾಮಾನ್ಯವಾಗಿ ನಾವು ಡ್ರೈವ ಇನ್ ಗಳಲ್ಲಿ ನೂರೆಂಟು ಆಯ್ಕೆಗಳು ಇದ್ದರೂ ಕೂಡ ಬರ್ಗರ್ ಖರೀದಿಸಲು ಕಾರಣ ಇದೆ.

ಹೋಟೆಲ್ಗಳಲ್ಲಿ ಎಲ್ಲಕ್ಕಿಂತ ಮುಂಚೆ ಆರ್ಡರ್ ಮಾಡೋದು ಇಡ್ಲಿ, ವಡೆ ಇಲ್ಲವೇ ದೋಸೆಗೆ

ಮನೆಗೆ ಅತಿಥಿಗಳು ಬಂದಾಗ ಮೊದಲು ಮಾಡುವುದು ಅವಲಕ್ಕಿ ಇಲ್ಲವೆ ಉಪ್ಪಿಟ್ಟನ್ನು

ಜೋರು ಗದ್ದಲದ ಸದಾ ಕರ್ಕಶವಾಗಿ ಕೇಳುವ ಚಾನಲ್ ಗಳಿಂದ ಸ್ವಚ್ಛವಾಗಿ ಸ್ಫುಟವಾಗಿ ಕೇಳುವ

ರೇಡಿಯೋ ಚಾನೆಲ್ ಗಳನ್ನು ಆಯ್ದುಕೊಳ್ಳುವುದು ಕೂಡ ಇದೇ ಕಾರಣಕ್ಕೆ. ಆಯ್ಕೆಗಳನ್ನು ಕಡಿತಗೊಳಿಸಿದಾಗ ಮಾರುಕಟ್ಟೆಯಲ್ಲಿ ಉತ್ಪನ್ನದ ಬೆಲೆ ಹೆಚ್ಚಾಗುತ್ತದೆ. ಆಯ್ಕೆಗಳನ್ನು ನೀವು ಸರಳಗೊಳಿಸಿದಾಗ ಜನರು ವೇಗವಾಗಿ ಪ್ರತಿ ಸ್ಪಂದಿಸುತ್ತಾರೆ. ಖಾಲಿ ಟೇಬಲ್ ತತ್ವ ನಮಗೆ ಕಲಿಸುವುದು ನಮಗೆ ಹೆಚ್ಚು ಉತ್ಪನ್ನಗಳ ಅವಶ್ಯಕತೆ ಇಲ್ಲ ಬದಲಾಗಿ ಉದ್ದೇಶ ಗಳ ಅವಶ್ಯಕತೆ ಇದೆ

ಬೆಳವಣಿಗೆ ಎಂದರೆ ಎಲ್ಲವನ್ನು ಕೊಡುವುದಲ್ಲ ಯಾವುದನ್ನು ಎಷ್ಟು ಕೊಡಬೇಕು ಎಂಬುದನ್ನು ಮರೆಯದೆ ಸರಿಯಾಗಿ ನೀಡುವುದು. ನೀವು ಕೊಡುವ ಉತ್ಪನ್ನದಲ್ಲಿ ಸ್ಪಷ್ಟತೆ ಇದ್ದರೆ ಜನರಲ್ಲಿ ಉತ್ಪನ್ನದ ಕುರಿತು ವಿಶ್ವಾಸ ಮೂಡುತ್ತದೆ. ಆಗ ವಸ್ತುಗಳನ್ನು ಖರೀದಿಸಲು ಜನರು ಮುಗಿಬೀಳುತ್ತಾರೆ.

ಏನಂತೀರಾ ಸ್ನೇಹಿತರೇ?

**ವೀಣಾ ಹೇಮಂತ್ ಗೌಡ ಪಾಟೀಲ್**
**ಮುಂಡರಗಿ ಗದಗ್**

# ಬೀದರ್ ಜಿಲ್ಲಾ ಸಂಘದ ಅಡಾಕ್ ಸಮಿತಿ ಮುಖ್ಯಸ್ಥರಾಗಿ ಆನಂದ ದೇವಪ್ಪ ಆಯ್ಕೆ

**ಬೀದರ್: ಡಿ.8–**ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಬೀದರ್ ಜಿಲ್ಲಾ ಘಟಕಕ್ಕೆ ಅಡಾಕ್ ಸಮಿತಿ ರಚಿಸಲಾಗಿದ್ದು, ಸಮಿತಿಯ ಮುಖ್ಯಸ್ಥರನ್ನಾಗಿ ಜನದನಿ ಪತ್ರಿಕೆಯ ಸಂಪಾದಕ ಅನಂದ ದೇವಪ್ಪ ಅವರನ್ನು ಅಧ್ಯಕ್ಷರಾಗಿ ಹಾಗೂ ಸಂಜೆವಾಣಿ ಪತ್ರಿಕೆಯ ಉಪ ಸಂಪಾದಕ ಶಿವಕುಮಾರ ಸ್ವಾಮಿ ಮತ್ತು ಕನ್ನಡಪ್ರಭ ಪತ್ರಿಕೆಯ ಸ್ಥಾನಿಕ ಸಂಪಾದಕರಾದ ಅಪ್ಪಾರಾವ ಸೌದಿ ಅವರನ್ನು ಸಮಿತಿಯ ಸದಸ್ಯರನ್ನಾಗಿ ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು.

ಶನಿವಾರ ಬೀದರ್ ಪತ್ರಿಕಾ ಭವನದಲ್ಲಿ ಸಂಘದ ರಾಜ್ಯ ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಅವರ ಅಧ್ಯಕ್ಷತೆಯಲ್ಲಿ

ನಡೆದ ಬೀದರ್ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಸರ್ವ ಸದಸ್ಯರ ಸಭೆಯಲ್ಲಿ ಸದಸ್ಯರ ಅಭಿಪ್ರಾಯ ಪಡೆದ ಬಳಿಕ ಸರ್ವಾನುಮತದ ನಿರ್ಣಯವನ್ನುಸಭೆಯಲ್ಲಿ ಘೋಷಿಸಿದರು.

ಘೋಷಣೆಗೆ ಮೊದಲು ಹಾಜರಿದ್ದ ಸರ್ವ ಸದಸ್ಯರ ಅಭಿಪ್ರಾಯ ಸಂಗ್ರಹಿಸಲಾಯಿತು.

ಹಿರಿಯ ಪತ್ರಕರ್ತ ಮಾಳಪ್ಪ ಅಡಸಾರೆ, ಬಾಬು ವಾಲಿ, ಮಲ್ಲಿಕಾರ್ಜುನ ಬಿರಾದಾರ, ಸಿದ್ರಾಮಯ್ಯ ಸ್ವಾಮಿ, ದೀಪಕ ವಾಲಿ, ಬಸವರಾಜ ಕಾಮಶೆಟ್ಟಿ, ನಾಗಶೆಟ್ಟಿ ಧರಂಪುರ, ಶಶಿಕಾಂತ ಶೆಂಬೆಳ್ಳಿ, ಪ್ರಥ್ವಿರಾಜ.ಎಸ್, ಸುನಿಲಕುಮಾರ ಕುಲಕರ್ಣಿ ಸೇರಿದಂತೆ ಬಹುತೇಕ ಎಲ್ಲ ಸದಸ್ಯರು ಆನಂದ ದೇವಪ್ಪ ಅವರನ್ನು ಅಡಾಕ್ ಸಮಿತಿಗೆ ಅಧ್ಯಕ್ಷರನ್ನಾಗಿಸಲು ಸಮ್ಮತಿ ಸೂಚಿಸಿದರು.

ಸದಸ್ಯರನ್ನುದ್ದೇಶಿಸಿ ಮಾತನಾಡಿದ ರಾಜ್ಯಾಧ್ಯಕ್ಷ ತಗಡೂರು ಅವರು, ಆಕ್ಟೋಬರ್ ತಿಂಗಳಲ್ಲಿ ಸಂಘದ ರಾಜ್ಯ ಹಾಗೂ ಎಲ್ಲ ಜಿಲ್ಲೆಗಳ ಜಿಲ್ಲಾ ಸಂಘಕ್ಕೆ ಚುನಾವಣೆಗಳು ನಡೆದು ಹೊಸ ಪದಾಧಿಕಾರಿಗಳು ಆಯ್ಕೆಯಾದರು. ಆದರೆ ಬೀದರ್ ಜಿಲ್ಲಾ ಸಂಘದಲ್ಲಿ ಒಗ್ಗಟ್ಟು ಪ್ರದರ್ಶನದ ನೆಪದಲ್ಲಿ ನಾಮಪತ್ರ ಸಲ್ಲಿಸದ ಕಾರಣ ಚುನಾವಣೆ ನಡೆಯಲಿಲ್ಲ. ಚುನಾವಣೆ ನಡೆಯದೆ ಇದ್ದಾಗ ರಾಜ್ಯ ಸಂಘದ ಮುಂದೆ ಎರಡು ಆಯ್ಕೆಗಳು ಮಾತ್ರ. ಒಂದು ಅಡಾಕ್ ಸಮಿತಿ ರಚಿಸುವುದು. ಮತ್ತೊಂದು ಮರು ಚುನಾವಣೆ ಮಾಡುವುದು.

ಇಲ್ಲಿ ಚುನಾವಣೆ ಬೇಡ, ಒಗ್ಗಟ್ಟಿನ ಮಂತ್ರ ಜಪಿಸಿ ಅಡಾಕ್





ಸಮಿತಿ ರಚಿಸಬೇಕೆಂಬ ತಮ್ಮೆಲ್ಲರ ಅಭಿಪ್ರಾಯದಂತೆ ಅಡಾಕ್ ಸಮಿತಿ ರಚಿಸಲಾಗಿದೆ ಎಂದರು.

ಈ ಸಮಿತಿಯು ಭವಿಷ್ಯದಲ್ಲಿ ಒಳ್ಳೆ ಕಾರ್ಯ ಕೈಗೊಳ್ಳಲಿ, ಇಲ್ಲಿಯ ಪತ್ರಕರ್ತರ ಹಿತ ಕಾಯುವ ಕಾರ್ಯ ನಡೆಯಬೇಕೆಂದು ನಿರ್ದೇಶಿಸಿದರು.

ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ.ಸಿ ಲೋಕೇಶ ಮಾತನಾಡಿ, 1932ರಲ್ಲಿ ಡಿ.ವಿ ಗುಂಡಪ್ಪನವರು ಸ್ಥಾಪಿಸಿರುವ ಈ ಸಂಘಟನೆಗೆ ಈಗ 94ವರ್ಷಗಳು ಪುರೈಸಿವೆ. ಶತಕದ ಅಂಚಿನಲ್ಲಿರುವ ಈ ಸಂಘಕ್ಕೆ 10ಸಾವಿರ ಪತ್ರಕರ್ತರು ಕೈ ಜೋಡಿಸಿದ್ದಾರೆ. 1.1ಕೋಟಿ ಠೇವಣಿ ಮಾಡಲಾಗಿದ್ದು, ಆರ್ಥಿಕ ಶಕ್ತಿಶಾಲಿ ಸಂಘವಾಗಿ ನಿಂತಿದೆ. ಖಾದ್ರಿ ಶಾಮಣ್ಣನಂತಹ ಅನೇಕ ರಾಜಕೀಯ ಮುತ್ಸದ್ದಿಗಳು, ಜನಪ್ರತಿನಿಧಿಗಳು, ಅಧಿಕಾರಿಗಳು, ಮಹಾತ್ಮರು, ದಾರ್ಶನಿಕರು ಈ ಸಂಘದ ಚುಕ್ಕಾಣಿ ಹಿಡಿದು ಮುನ್ನಡಿಸಿದ್ದಾರೆ. ಇಂಥ ಬೃಹತ್ ಸಂಘಕ್ಕೆ ತಾವೆಲ್ಲ ಸದಸ್ಯರಾಗಿ ಇಲ್ಲಿ ಸೇರಿರುವುದು ಹಾಗೆ ರಾಜ್ಯ ಸಂಘಕ್ಕೆ ಶತಾಯುಷಿ ಭೀಮಣ್ಣ ಖಂಡ್ರೆ ಅವರ ಹೆಸರಿನಲ್ಲಿ ದತ್ತಿ ನಿಧಿ ಸಮರ್ಪಿಸುತ್ತಿರುವ ಈಶ್ವರ ಖಂಡ್ರೆ ಅವರಿಗೆ ಕೃತಜ್ಞತೆ ಸಲ್ಲಿಸುತ್ತ, ಭಿಮಣ್ಣ ಖಂಡ್ರೆಯವರಿಗೆ ಭಗವಂತ ಇನ್ನು ಆಯುರಾರೋಗ್ಯ ಕೊಟ್ಟು ಕಾಪಾಡಲಿ ಎಂದು ಪ್ರಾರ್ಥಿಸುವುದಾಗಿ ಹೇಳಿದರು.

ಆರಂಭದಲ್ಲಿ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಡಿ.ಕೆ ಗಣಪತಿ ಸ್ವಾಗತಿಸಿ, ಅಡಾಕ್ ಸಮಿತಿ ಸದಸ್ಯರಾದ ಶಿವಕುಮಾರ ಸ್ವಾಮಿ ನಿರೂಪಿಸಿ, ಅಪ್ಪಾರಾವ ಸೌದಿ ವಂದಿಸಿದರು.

# ಉತ್ತರ ಕರ್ನಾಟಕದ ಸಮಸ್ಯೆ ಚರ್ಚೆಗೆ ಆದ್ಯತೆ



**ಬೆಳಗಾವಿ,ಡಿ. 8–**ವಿಧಾನ ಪರಿಷತ್ ಕಲಾಪದಲ್ಲಿ ಉತ್ತರ ಕರ್ನಾಟಕದ ಸಮಸ್ಯೆಗಳು, ವಿಷಯಗಳ ಚರ್ಚೆಗೆ ಹೆಚ್ಚಿನ ಆದ್ಯತೆ ನೀಡಲಾಗುವುದು ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ್ ಹೊರಟ್ಟಿ ತಿಳಿಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಪರಿಷತ್ ಕಲಾಪದಲ್ಲಿ ಕಳೆದ ಅಧಿವೇಶನಗಳಲ್ಲಿ ಕರ್ನಾಟಕದ ಸಮಸ್ಯೆಗಳು, ವಿಷಯಗಳ ಕುರಿತು ಹೆಚ್ಚಿನ ಚರ್ಚೆ ನಡೆದಿಲ್ಲ, ಆದರೆ ಈ ಬಾರಿ ಅಧಿವೇಶನದಲ್ಲಿ ಕರ್ನಾಟಕದ ಸಮಸ್ಯೆಗಳು, ವಿಷಯಗಳ ಚರ್ಚೆಗೆ ಹೆಚ್ಚು ಆದ್ಯತೆ ನೀಡಲಾಗುವುದು ಎಂದು ಹೇಳಿದರು.

ದಕ್ಷಿಣ ಕರ್ನಾಟಕದ ಶಾಸಕರು ಉತ್ತರ ಕರ್ನಾಟಕದ ಜನರ ಸಮಸ್ಯೆ ಚರ್ಚಿಸುವುದಕ್ಕೆ ಅವಕಾಶ ನೀಡಲಾಗುವುದು ಪ್ರತಿದಿನಪ್ರಶ್ನೋತ್ತರ ಮುಗಿದ ಬಳಿಕ ಉತ್ತರ ಕರ್ನಾಟಕದ ಸಮಸ್ಯೆಗಳ ಕುರಿತು ಚರ್ಚೆ ಮಾಡುತ್ತೇವೆ. ಕಳೆದ ಅಧಿವೇಶನದಲ್ಲಿ ಉತ್ತರ ಕರ್ನಾಟಕದ ಸಮಸ್ಯೆಗಳ ಬಗ್ಗೆ ಉತ್ತರ ಕರ್ನಾಟಕದ ಶಾಸಕರು ಮಾತನಾಡಲಿಲ್ಲ. ದಕ್ಷಿಣ ಕರ್ನಾಟಕದ ಶಾಸಕರು ಮಾತನಾಡಿದ್ದಾರೆ. ಅದನ್ನು ಬರೆದು ಇಟ್ಟಿದ್ದೇನೆ. ಫೋನ್ ಮಾಡಿ ಎಲ್ಲಾ ಶಾಸಕರಿಗೂ ಹೇಳುತ್ತಿದ್ದೇನೆ ಎಂದು ಹೇಳಿದರು.

ಸದನದಲ್ಲಿ ಭಾಗವಹಿಸುವಂತೆ ಈಗಾಗಲೇ 38 ಜನರಿಗೆ ಮಾತನಾಡಿದ್ದೇನೆ. ಉಳಿದವರ ಜೊತೆಯೂ ಮಾತನಾಡುತ್ತೇನೆ. ಎಲ್ಲರೂ ಅಧಿವೇಶನದಲ್ಲಿ ಭಾಗವಹಿಸಿ ಸದನದ ಗೌರವ ಹೆಚ್ಚಿಸಬೇಕು ಎಂದು ಹೊರಟ್ಟಿ ಮನವಿ ಮಾಡಿದರು.ಸಭಾಪತಿ ಹುದ್ದೆಯಿಂದ ಕೆಳಗಡೆ ಇಳಿಸುವ ವಿಚಾರದ ಕುರಿತು ಮಾತನಾಡಿದ ಅವರು, ನಾನು ಒಂದು ಸಲ ಪರಿಷತ್ ಸಭಾಪತಿ ಆಗಿದ್ದೇನೆ. ಎಷ್ಟು ವರ್ಷ ಆಗಿದ್ದರೂ ಮಾಜಿ ಆಗಲೇಬೇಕು. ವಿಧಾನ ಪರಿಷತ್ ಸಭಾಪತಿ ಹುದ್ದೆ ಬಗ್ಗೆ ನಾನು ತಲೆ ಕೆಡೆಸಿಕೊಳ್ಳುವುದಿಲ್ಲ. ಸರ್ಕಾರ ಮತ್ತು ಶಾಸಕರು ತೆಗೆದು ಕೊಳ್ಳುವ ತೀರ್ಮಾನಕ್ಕೆ ನಾನು ಬದ್ಧ ಎಂದು ತಿಳಿಸಿದರು.

ಸದನದಲ್ಲಿ ನನ್ನ ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸುವ ಸಮಯ ಬಂದರೆ ನಿಯಮಾವಳಿ ಪ್ರಕಾರ ನಡೆದುಕೊಳ್ಳುವೆ ಎಂದು ಹೇಳಿದರು.ವಿಧಾನ ಪರಿಷತ್ ನ ಖಾಲಿ ಹುದ್ದೆಗಳ ನೇಮಕಾತಿಯಲ್ಲಿ ಯಾವುದೇ ರೀತಿಯ ಅವ್ಯವಹಾರ ನಡೆದಿಲ್ಲ,30 ಹುದ್ದೆಗಳನ್ನು ಕರ್ನಾಟಕ ಪರೀಕ್ಷೆ ಪ್ರಾಧಿಕಾರ,(ಕೆಇಎ) ಪರೀಕ್ಷೆ ನಡೆಸಿ ಹೆಚ್ಚು ಅಂಕಗಳಿಸಿದವರ ಪಟ್ಟಿ ನೀಡಿದ್ದು,ಅದನ್ನು ಪರಿಶೀಲನೆ ನಡೆಸಿ ಕ್ರಮವು ಕೈಗೊಳ್ಳಲಾಗಿದೆ ಎಂದು ಸ್ಪಷ್ಟಪಡಿಸಿದರು..

# ರಾಹುಲ್ ಗಾಂಧಿಗೆ ಲೋಕಸಭೆ ಪ್ರತಿಪಕ್ಷದ ನಾಯಕನ ಘನತೆ ಇನ್ನು ಅರ್ಥವಾಗಿಲ್ಲ : ಬಿಜೆಪಿ

**ಬೆಂಗಳೂರು,ಡಿ.8–** ಪ್ರಧಾನಿ ನರೇಂದ್ರಮೋದಿ ನೇತೃತ್ವದ ಕೇಂದ್ರ ಸರ್ಕಾರವು ವಿರೋಧ ಪಕ್ಷಗಳನ್ನು ನಿರ್ಲಕ್ಷಿಸುತ್ತಿದ್ದು, ವಿದೇಶಿ ನಿಂಯೋಗಗಳಿಗೆ ವಿರೋಧ ಪಕ್ಷದ ನಾಯಕರನ್ನು ಭೇಟಿಯಾಗದಂತೆ ಹೇಳುತ್ತಿದೆ ಎಂದು ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ನೇರ ಆರೋಪ ಮಾಡಿದ್ದಾರೆ.

ಇದಕ್ಕೆ ತಿರುಗೇಟು ನೀಡಿರುವ ಬಿಜೆಪಿ, ರಾಹುಲ್ ಗಾಂಧಿ ವಿರೋಧ ಪಕ್ಷದ ನಾಯಕರಾಗಿದ್ದರೂ, ವಿದೇಶಿ ಅತಿಥಿಗಳು ವಿರೋಧ ಪಕ್ಷವನ್ನು ಭೇಟಿಯಾಗಬೇಕೆ ಅಥವಾ ಬೇಡವೇ ಎಂಬುದನ್ನು ನಿರ್ಧರಿಸುವಲ್ಲಿ ಸರ್ಕಾರಕ್ಕೆ ಯಾವುದೇ ಪಾತ್ರವಿಲ್ಲ ಎಂದು ಅವರಿಗೆ ತಿಳಿದಿಲ್ಲ. ಇದು ಸಂಪೂರ್ಣವಾಗಿ ವಿದೇಶಿ ಅತಿಥಿಗಳ ವೈಯಕ್ತಿಕ ನಿರ್ಧಾರ. ಇದರಲ್ಲಿ ಸರ್ಕಾರಕ್ಕೆ ಯಾವುದೇ ಪಾತ್ರವಿಲ್ಲ. ಅವರು, ತುಂಬಾ ಬಾಲಿಶವಾಗಿ ವರ್ತಿಸುತ್ತಿದ್ದಾರೆ. ಅವರು ಇನ್ನೂ ತಮ ಕಾನ್ವೆಂಟ್ ಶಾಲೆಯ ಆಟಗಳಿಂದ ಮಾನಸಿಕವಾಗಿ ಹೊರಬಂದಿಲ್ಲ ಎಂದು ತೋರುತ್ತದೆ.

ರಾಹುಲ್ ಗಾಂಧಿಗೆ ತಾನು ಹೊಂದಿರುವ ಹುದ್ದೆಯ ಘನತೆ ಅರ್ಥವಾಗುತ್ತಿಲ್ಲ. ಪ್ರಜಾಪ್ರಭುತ್ವ ರಾಷ್ಟ್ರದಲ್ಲಿ ತಾನು ಗೌರವಾನ್ವಿತ ಮತ್ತು ಗಂಭೀರ ಸ್ಥಾನದಲ್ಲಿದ್ದೇನೆಂದು ತಿಳಿದಿಲ್ಲ ಎಂದು ವ್ಯಂಗ್ಯ ಮಾಡಿದೆ.

ರಾಹುಲ್ ಗಾಂಧಿಯವರ ಹೇಳಿಕೆಗಳು ಎಷ್ಟು ಹಾಸ್ಯಾಸ್ಪದವೆಂದರೆ, ಅವುಗಳ ಬಗ್ಗೆ ಯೋಚಿಸಿ ನಗುವಷ್ಟು. ಮೋದಿಯವರು ದೇಶದ ಪ್ರಧಾನಿ. ಅವರು ರಾಷ್ಟ್ರಿಯ ಅಭಿವೃದ್ಧಿಯಲ್ಲಿ ನಿರತರಾಗಿದ್ದಾರೆ ಇಂಥ ಸಣ್ಣ ವಿಷಯಗಳಿಗೆ ಅವರಿಗೆ ಸಮಯವಿಲ್ಲ. ಹೀಗಿದ್ದಾಗ ವಿದೇಶಿ ನಾಯಕರಿಗೆ ರಾಹುಲ್ ಗಾಂಧಿಯನ್ನು ಭೇಟಿಯಾಗಬೇಡಿ ಎಂದು ಅವರು ಹೇಳುವುದಾದರೆ ಇದನ್ನು ಯಾರಾದರೂ ಹೇಗೆ ಊಹಿಸಲು ಸಾಧ್ಯ? ಎಂದು ಪ್ರಶ್ನೆ ಮಾಡಿದೆ.

ರಾಹುಲ್ ಗಾಂಧಿಯವರು ವಿರೋಧಪಕ್ಷದ ನಾಯಕರಾದ ನಂತರ ಅನೇಕ ವಿದೇಶಿ ನಾಯಕರು ಈಗಾಗಲೇ ಅವರನ್ನು ಭೇಟಿ ಮಾಡಿದ್ದಾರೆ. ಅವರಲ್ಲಿ ಶೇಖ್ ಹಸೀನಾ (10 ಜೂನ್ 2024), ಮಲೇಷ್ಯಾದ ಪ್ರಧಾನಿ ಅನ್ವರ್ ಇಬ್ರಾಹಿಂ (21 ಆಗಸ್ಟ್ 2024), ನ್ಯೂಜಿಲೆಂಡ್ ಪ್ರಧಾನಿ ಕ್ರಿಸ್ಟೋಫರ್ ಲಕ್ಸನ್ (18 ಮಾರ್ಚ್ 2025), ಮತ್ತು ಮಾರಿಷಸ್ ಪ್ರಧಾನಿ ನವೀನ್‌ಚಂದ್ರ ರಾಮಗೂಲಮ್ (16 ಸೆಪ್ಟೆಂಬರ್ 2025) ಸೇರಿದ್ದಾರೆ.

ಅಲ್ಲದೆ, ವಿದೇಶಿ ರಾಷ್ಟ್ರಗಳ ಮುಖ್ಯಸ್ಥರು ಭಾರತ ಭೇಟಿಯ ಸಮಯದಲ್ಲಿ ವಿರೋಧ ಪಕ್ಷದ ನಾಯಕನನ್ನು ಭೇಟಿಯಾಗಬೇಕು ಎಂಬ ಯಾವುದೇ ಸ್ಥಿರ ಅಥವಾ ಅಧಿಕೃತ ನಿಯಮವಿಲ್ಲ. ಆದರೆ ಇದನ್ನು ಸಾಮಾನ್ಯವಾಗಿ ಪ್ರಜಾಪ್ರಭುತ್ವ ಸಂಪ್ರದಾಯ ಮತ್ತು ಶಿಷ್ಟಾಚಾರದ ಭಾಗವಾಗಿ ನೋಡಲಾಗುತ್ತದೆ. ಆದಾಗ್ಯೂ ವಿದೇಶಾಂಗ ಸಚಿವಾಲಯ ಇದನ್ನು ಎಂದಿಗೂ ಕಡ್ಡಾಯ ನಿಯಮವೆಂದು ಘೋಷಿಸಿಲ್ಲ ಎಂದು ಸ್ಪಷ್ಟಪಡಿಸಿದೆ.

ರಾಹುಲ್ ಗಾಂಧಿ ಇನ್ನೂ 10 ಜನಪಥ್ ಮನಸ್ಥಿತಿಯಲ್ಲಿ ಸಿಲುಕಿಕೊಂಡಿದ್ದಾರೆ. ಮನಮೋಹನ್ ಸಿಂಗ್ ಸರ್ಕಾರದಲ್ಲಿ, ಸೋನಿಯಾ ಗಾಂಧಿ, ಯುಪಿಎ ಅಧ್ಯಕ್ಷೆಯಾಗಿ, ಪ್ರಧಾನಿಗಿಂತಲೂ ಮೇಲಿದ್ದರು. ಅನೇಕ ವಿದೇಶಿ ನಾಯಕರು ಪ್ರಧಾನಿಯನ್ನು ಭೇಟಿ ಮಾಡದಿದ್ದರೂ ಅವರನ್ನು ಭೇಟಿಯಾಗುತ್ತಿದ್ದರು. ರಾಹುಲ್ ಗಾಂಧಿಯವರ ರಾಜವರ್ತನೆ ಇನ್ನೂ ಉಳಿದಿದೆ. ಇದು ನಿರಾಶೆಗೊಂಡ ಹೇಳಿಕೆಗಳ ರೂಪದಲ್ಲಿ ಹೊರಬರುತ್ತದೆ ಎಂದು ಟೀಕಿಸಿದೆ.

ಅಂತಹ ಯಾವುದೇ ಶಿಷ್ಟಾಚಾರವಿಲ್ಲದಿದ್ದರೂ ವಿದೇಶಿ ನಾಯಕರು ತಮನ್ನು ಭೇಟಿಯಾಗದಿರುವ ಬಗ್ಗೆ ಅವರು ಕೋಪಗೊಂಡಿದ್ದಾರೆ. ಆದರೆ ವಿರೋಧ ಪಕ್ಷದ ನಾಯಕರಾಗಿರುವಾಗ, ಅವರು ಪ್ರಜಾಪ್ರಭುತ್ವ ಮತ್ತು ಸಾಂವಿಧಾನಿಕ ಮಾನದಂಡಗಳನ್ನು ಎಷ್ಟು ಬಾರಿ ಅವಮಾನಿಸಿದ್ದಾರೆಂದು ಅವರು ಇಂದಿಗೂ ಅರಿತುಕೊಂಡಿಲ್ಲ. ಅವರು ಯಾವಾಗಲೂ ಸಾಂದರ್ಭಿಕವಾಗಿ ವರ್ತಿಸಿದ್ದಾರೆ ಎಂದು ಆರೋಪಿಸಿದೆ.

ವಿದೇಶಕ್ಕೆ ಹೋದಾಗ, ಅವರು ಯಾರಿಗಾದರೂ ಅಧಿಕೃತವಾಗಿ ಮಾಹಿತಿ ನೀಡಿದ್ದಾರೆಯೇ? ರಾಹುಲ್ ಗಾಂಧಿ ರಾಜಕೀಯ ಮತ್ತು ಸಾಂವಿಧಾನಿಕ ಜವಾಬ್ದಾರಿಗಳನ್ನು ಗಂಭೀರವಾಗಿ ಪರಿಗಣಿಸುವುದಿಲ್ಲ. ನ್ಯಾಯಮೂರ್ತಿ ಸೂರ್ಯಕಾಂತ್ ಭಾರತದ 53ನೇ ಮುಖ್ಯ ನ್ಯಾಯಮೂರ್ತಿಯಾದರು. ಇದು ಒಂದು ಪ್ರಮುಖ ಸಾಂವಿಧಾನಿಕ ಸಂದರ್ಭವಾಗಿತ್ತು. ರಾಷ್ಟ್ರಪತಿ, ಪ್ರಧಾನಿ ಮೋದಿ, ಗೃಹ ಸಚಿವ ಅಮಿತ್ ಶಾ, ರಕ್ಷಣಾ ಸಚಿವ ರಾಜನಾಥ್ ಸಿಂಗ್, ಲೋಕಸಭಾ ಸ್ಪಿಕರ್ ಓಂ ಬಿರ್ಲಾ, ಬಿಜೆಪಿ ಅಧ್ಯಕ್ಷ ಜೆ.ಪಿ.ನಡ್ಡಾ, ಮಾಜಿ ಉಪಾಧ್ಯಕ್ಷ ಜಗದೀಪ್ ಧನ್ಕರ್, ಮಾಜಿ ಸಿಜೆಐ ಬಿ.ಆರ್.ಗವಾಯಿ ಮತ್ತು ಅನೇಕ ಪ್ರಮುಖ ಗಣ್ಯರು ಉಪಸ್ಥಿತರಿದ್ದರು. ಇದಕ್ಕೂ ಮೊದಲು, ಪ್ರಜಾಪ್ರಭುತ್ವದ ಅತಿದೊಡ್ಡ ಆಚರಣೆಯಾದ ಕೆಂಪುಕೋಟೆಯಲ್ಲಿ ನಡೆದ ಸ್ವಾತಂತ್ರ್ಯ ದಿನಾಚರಣೆ ಸಂದರ್ಭದಲ್ಲಿ ರಾಹುಲ್ ಗಾಂಧಿ ಗೈರುಹಾಜರಾಗಿದ್ದರು. ಉಪಾಧ್ಯಕ್ಷ ಸಿ.ಪಿ.ರಾಧಾಕೃಷ್ಣನ್ ಅವರ ಪ್ರಮಾಣವಚನ ಸಮಾರಂಭದಲ್ಲೂ ರಾಹುಲ್ ಕಾಣೆಯಾಗಿದ್ದರು, ಇದು ಸಾಂವಿಧಾನಿಕ ಕಾರ್ಯಕ್ರಮವೂ ಆಗಿದೆ.

ಚುನಾವಣಾ ರ್ಯಾಲಿಗಳಲ್ಲಿ, ರಾಹುಲ್ ಗಾಂಧಿ ಸಂವಿಧಾನದ ಕೆಂಪು ಪ್ರತಿಯನ್ನು ಹಿಡಿದು ಸಂವಿಧಾನ ಅಪಾಯದಲ್ಲಿದೆ ಎಂದು ಕೂಗುತ್ತಲೇ ಇರುತ್ತಾರೆ. ಆದರೆ ನಿಜ ಜೀವನದಲ್ಲಿ ಸಂವಿಧಾನವನ್ನು ಗೌರವಿಸುವ ವಿಷಯಕ್ಕೆ ಬಂದಾಗ, ಅವರು ಬೇಜವಾಬ್ದಾರಿಯಿಂದ ವರ್ತಿಸುತ್ತಾರೆ. ತಾವು ಬಯಸಿದ



ರೀತಿಯಲ್ಲಿ ನಡೆದರೆ ಅದು ಸರಿ, ಇಲ್ಲದಿದ್ದರೆ ಎಲ್ಲವೂ ತಪ್ಪೆ? ಎಂದು ನಂಬುತ್ತಾರೆ. ಅವರ ಮನಸ್ಥಿತಿ ಇನ್ನೂ ರಾಜಮನೆತನದದು. ಆದರೆ ಭಾರತದಲ್ಲಿ ರಾಜಪ್ರಭುತ್ವ ಬಹಳ ಹಿಂದೆಯೇ ಕೊನೆಗೊಂಡಿತು ಎಂದು ಅವರಿಗೆ ತಿಳಿದಿಲ್ಲ ಎಂದು ಅಪಹಾಸ್ಯ ಮಾಡಿದೆ.

10 ಜನಪಥ್‌ನಲ್ಲಿ ಉಳಿದಿದ್ದನ್ನು 2014ರಲ್ಲಿ ಮೋದಿ ಮುಗಿಸಿದರು. ವಿದೇಶಿ ನಾಯಕರೊಬ್ಬರು ತಮನ್ನು ಭೇಟಿ ಮಾಡುವ ಅಗತ್ಯವಿಲ್ಲ ಎಂದು ಭಾವಿಸಿದರೆ, ಅದರಲ್ಲಿ ಸರ್ಕಾರದ ಪಾತ್ರವಿಲ್ಲ ಎಂದು ರಾಹುಲ್ ಗಾಂಧಿ ಅರ್ಥಮಾಡಿಕೊಳ್ಳಬೇಕು. ಇಂತಹ ಬಾಲಿಶ ಹೇಳಿಕೆಗಳನ್ನು ನೀಡುವ ಮೂಲಕ, ಅವರು ಭಾರತವನ್ನು ಅಂತಾರಾಷ್ಟ್ರಿಯ ಮಟ್ಟದಲ್ಲಿ ಮೂರ್ಖರನ್ನಾಗಿ ಮಾಡುತ್ತಾರೆ. ಏಕೆಂದರೆ ದುರದೃಷ್ಟವಶಾತ್ ಅವರು ವಿರೋಧ ಪಕ್ಷದ ನಾಯಕನ ಸ್ಥಾನವನ್ನು ಹೊಂದಿದ್ದಾರೆ ಮತ್ತು ಅಂತಹ ಜವಾಬ್ದಾರಿಯುತ ಸ್ಥಾನದಿಂದ ಬರುವ ಹೇಳಿಕೆಗಳು ದೇಶದ ಪ್ರತಿಷ್ಠೆಯ ಮೇಲೆ ಪರಿಣಾಮ ಬೀರಬಹುದು ಎಂದು ಬಿಜೆಪಿ ಹೇಳಿದೆ.

ನಡೆದಿದೆ.



ಯುವ ಮಾರ್ಗ

ಮಂಗಳವಾರ: 09–12–2025

## ಬೆಕಿನಾಳ ಗ್ರಾಮದ ಡಾ ಪ್ರವೀಣ್ ಬಿರಾದಾರ್ ಗೆ "ಶಿಕ್ಷಣ ಸಿರಿ " ರಾಜ್ಯೋತ್ಸವ ಪ್ರಶಸ್ತಿ ಲಭಿಸಿದೆ



ಯುವಮಾರ್ಗ ಸುದ್ದಿ

**ತಾಳಿಕೋಟೆ,ಡಿ.8–**ಜ್ಞಾನ ಶಾರದೆ ಅಕಾಡೆಮಿಯ ಅಧ್ಯಕ್ಷರು ಮತ್ತು" ಭಾರತೀಯ ಶಿಕ್ಷಣ ರತ್ನ ರಾಷ್ಟ್ರ ಪ್ರಶಸ್ತಿ " ವಿಜೇತರಾದ ಡಾ ಪ್ರವೀಣ್ ಬಿರಾದಾರ ಅವರಿಗೆ ಬೆಂಗಳೂರಿನ ಅನ್ವೇಷಣೆ ಸಾಂಸ್ಕೃತಿಕ ಪ್ರತಿಷ್ಠಾನದ" ಶಿಕ್ಷಣ ಸಿರಿ ರಾಜ್ಯೋತ್ಸವ " ಪ್ರಶಸ್ತಿಗೆ ಭಾಜನರಾಗಿದ್ದಾರೆ.

**ಮೂಲತ:** ತಾಳಿಕೋಟಿ ತಾಲೂಕಿನ ಬೆಕಿನಾಳ ಗ್ರಾಮದ ದಿ. ಬಸನಗೌಡ ಹಾಗೂ ಶರಣಮ್ಮ ಬಿರಾದಾರ್ ದಂಪತಿಯ ಪುತ್ರರು ಮತ್ತು ದಿ ಭಾಗ್ಯಶ್ರೀ ಪ್ರವೀಣ್ ಬಿರಾದರ್ ಅವರ ತಂದೆ ಯಾದ ಇವರು, ಪ್ರಸ್ತುತ ಕಲ್ಬುರ್ಗಿ ನಿವಾಸಿಯಾಗಿದ್ದಾರೆ.

ಶಿಕ್ಷಣ ಕ್ಷೇತ್ರದಲ್ಲಿ ತಮ್ಮದೇ ಚಾಪು ಮೂಡಿಸಿರುವ ಇವರು, ವಿವಿಧ ಶಿಕ್ಷಣ ಸಂಸ್ಥೆಗಳಲ್ಲಿ ಕಳೆದ 20 ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದಾರೆ. ಇವರ ಸೇವೆ ಪರಿಗಣಿಸಿ " ಶಿಕ್ಷಣ ಸಿರಿ " ರಾಜ್ಯೋತ್ಸವ ಪ್ರಶಸ್ತಿ ನೀಡಲಾಗಿದೆ. ಇವರ ಶೈಕ್ಷಣಿಕ ಸೇವೆಗೆ ಇಂಟರ್ನ್ಯಾಷನಲ್ ಹ್ಯೂಮನ್ ಡೆವಲಪ್ಮೆಂಟ್ (USA) ವಿವಿ ಯಿಂದ ಡಾಕ್ಟರೇಟ್ ಪಡೆದಿದ್ದಾರೆ. ಇನ್ನೂ ಅನೇಕ ರಾಜ್ಯ, ರಾಷ್ಟ್ರಮತ್ತು ಅಂತರಾಷ್ಟ್ರೀಯ ಪ್ರಶಸ್ತಿಗಳು ಇವರಿಗೆ ಲಭಿಸಿರುತ್ತದೆ.

ಪ್ರಸ್ತುತ ಕಲ್ಬುರ್ಗಿಯ ಜ್ಞಾನ ಶಾರದೆ ಅಕಾಡೆಮಿಯ ಅಧ್ಯಕ್ಷರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

ಇವರ ಈ ಸಾಧನೆಗೆ ಬೆಕ್ಕಿನಾಳ ಗ್ರಾಮಸ್ಥರು, ಆಕ್ಸರ್ಡ್ ಪಾಟೀಲ್ ಇಂಗ್ಲಿಷ್ ಮೀಡಿಯಂ ಶಾಲೆ ನಾಗರಭಟ್ಟ ಅಧ್ಯಕ್ಷರು, ಸಿಬ್ಬಂದಿ ವರ್ಗ ಮತ್ತು ವಿದ್ಯಾರ್ಥಿಗಳು ಮತ್ತು ಬ್ರಿಲಿಯಂಟ್ ಇಂಗ್ಲಿಷ್ ಮೀಡಿಯಂ ಶಾಲೆ ಮೈಲೇಶ್ವರ ತಾಳಿಕೋಟಿ ಅಧ್ಯಕ್ಷರು ಸಿಬ್ಬಂದಿ ವರ್ಗ ಮತ್ತು ವಿದ್ಯಾರ್ಥಿಗಳು ಹರ್ಷ ವ್ಯಕ್ತಪಡಿಸಿದ್ದಾರೆ.

## ಮಾನ್ವಿ: ಡಿ. 10 ರಂದು ವಿದ್ಯುತ್ ವ್ಯತ್ಯಯ

**ಮಾನ್ವಿ,ಡಿ.8–** 110/11 ಕೆ.ವಿ ಮಾನ್ವಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ 20 ಎಂವಿಎ ಸಾಮರ್ಥ್ಯದ ಎರಡು ಪವರ್ ಟ್ರಾನ್ಸ್‌ಫಾರ್ಮರ್‌ಗಳ ತುರ್ತು ದುರಸ್ತಿ ಕಾಮಗಾರಿಯನ್ನು ಹಮ್ಮಿಕೊಂಡಿರುವುದರಿಂದ, ಡಿ.10 ರಂದು ಬೆಳಿಗ್ಗೆ 09:00 ಗಂಟೆಯಿಂದ ಸಂಜೆ 04:00 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ಅಡಚಣೆಯಾಗಲಿದೆ. ಈ ಕಾರಣದಿಂದಾಗಿ, ಮಾನ್ವಿ ವಿದ್ಯುತ್ ವಿತರಣಾ ಕೇಂದ್ರದಿಂದ ವಿದ್ಯುತ್ ಸರಬರಾಜಾಗುವ ಮಾನ್ವಿ ನಗರ ಮತ್ತು ಸುತ್ತಮುತ್ತಲಿನ ಗ್ರಾಮಗಳಿಗೆ ವಿದ್ಯುತ್ ಪೂರೈಕೆ ಸ್ಥಗಿತಗೊಳ್ಳಲಿದೆ. ಜೆಸ್ಕಾಂ ಗ್ರಾಹಕರು ಮತ್ತು ಸಾರ್ವಜನಿಕರು ಈ ದುರಸ್ತಿ ಕಾರ್ಯದ ಅವಧಿಯಲ್ಲಿ ನಮ್ಮೊಂದಿಗೆ ಸಹಕರಿಸಬೇಕೆಂದು ಜೆಸ್ಕಾಂ ಎಇಇ ಪ್ರಕಟಣೆಯಲ್ಲಿ ಕೋರಿದ್ದಾರೆ

## ರಾಮಲಿಂಗಯ್ಯ ಶ್ರೀಗಳಿಗೆ ಗೌರವ ಸಮರ್ಪಣೆ



ಯುವಮಾರ್ಗ ಸುದ್ದಿ

**ತಾಳಿಕೋಟೆ,ಡಿ.8–**ತಾಲೂಕಿನ ಚಬನೂರ ಹಿರೇಮಠದ ಪೀಠಾಧಿಪತಿ ಜ್ಯೋತಿಷ್ಯ ರತ್ನ ಪರಮ ಪೂಜ್ಯ ರಾಮಲಿಂಗಯ್ಯ ಮಹಾಸ್ವಾಮಿಗಳಿಗೆ ಅವರ ಧಾರ್ಮಿಕ ಸೇವಾ ಕಾರ್ಯಗಳಿಗಾಗಿ ಸುರಪೂರ ತಾಲೂಕಿನ ನಗನೂರು ಗುಡ್ಡದ ಗುರುಲಿಂಗೇಶ್ವರ ಮಠದ ಜಾತ್ರಾ ಮಹೋತ್ಸವದ ಅಂಗವಾಗಿ ಹಮ್ಮಿಕೊಂಡ ಧರ್ಮಸಭೆ ಕಾರ್ಯಕ್ರಮದಲ್ಲಿ ಗೌರವ ಸಮರ್ಪಣೆ ಸಲ್ಲಿಸಲಾಯಿತು. ನಾಡಿನ ಪೂಜ್ಯ ಮಠಾಧೀಶರು ಹಾಗೂ ಗಣ್ಯ ಮಾನ್ಯರು ಉಪಸ್ಥಿತರಿದ್ದರು.



**ಕಲಬುರಗಿ,ಡಿ.8– ನಗರದ ಎಸ್.ಬಿ.ಕಾಲೇಜು ರಸ್ತೆಯಲ್ಲಿ ಡ್ರೈನೇಜ್ ಒಡೆದು ಮಲೀನ ನೀರು ರಸ್ತೆ ಮೇಲೆ ಹರಿದು ಹೋಗುತ್ತಿರುವುದರಿಂದ ತೊಂದರೆಯಾಗುತ್ತಿದೆ. ಈ ಬಗ್ಗೆ ಸಂಬಂಧಪಟ್ಟವರು ಗಮನ ಹರಿಸಿ ಡ್ರೈನೇಜ್ ದುರಸ್ತಿಗೆ ಅಗತ್ಯವಾದ ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.**

# ಮಕ್ಕಳ ಪ್ರತಿಭೆಯನ್ನು ಅನಾವರಣ ಮಾಡುವ ವೇದಿಕೆ ಪ್ರತಿಭಾ ಕಾರಂಜಿ : ಶಿವರಾಜ ಪೂಜಾರಿ

ಯುವಮಾರ್ಗ ಸುದ್ದಿ

**ಅರಕೇರಾ,ಡಿ.8–**ಮಕ್ಕಳಲ್ಲಿ ಪ್ರತಿಭೆಯೆನ್ನುವುದು ಪಠ್ಯವಿಷಯವನ್ನು ಹೊರತು ಪಡಿಸಿಯು ಸೂಕ್ತವಾಗಿ ಅಡಗಿರಬಹುದು. ಅದು ಸಂಗೀತ, ಚಿತ್ರಕಲೆ, ನೃತ್ಯ, ಮಿಮಿಕ್ರಿ, ಭಾಷಣ, ಹೀಗೆ ಯಾವುದೇ ರೂಪದಲ್ಲಿ ಯೂ ಮಕ್ಕಳ ಪ್ರತಿಭೆ ಅಡಗಿರುತ್ತದೆ. ಅದನ್ನು ಗುರುತಿಸುವುದೇ ಪ್ರತಿಭಾ ಕಾರಂಜಿ ಕಾರ್ಯಕ್ರಮ ಉದ್ದೇಶ ಮತ್ತು ಸರ್ಕಾರದ ಘನ ಉದ್ದೇಶವಾಗಿದೆ ಎಂದು ಕ್ಷೇತ್ರ ಸಮನ್ವಯಾಧಿಕಾರಿ ಶಿವರಾಜ ಪೂಜಾರಿ ಹೇಳಿದ್ದರು.

ಸಮುದ್ರ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸೋಮವಾರ ನಡೆದ ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡುತ್ತಿದರು.

ಬಿ.ಗಣೇಕಲ್ ವಲಯದಲ್ಲಿ ಒಂದು ಪ್ರೌಢ ಶಾಲೆ, ನಾಲ್ಕು ಹಿರಿಯ ಪ್ರಾಥಮಿಕ, ಹತ್ತು ಕಿರಿಯ ಪ್ರಾಥಮಿಕ ಶಾಲೆ ಒಟ್ಟು 15 ಶಾಲೆಯ ವಿದ್ಯಾರ್ಥಿಗಳು ಪ್ರತಿಭಾ ಕಾರಂಜಿಯಲ್ಲಿ ಭಾಗವಹಿಸಿದ್ದರು. ಪ್ರಥಮ, ದ್ವಿತೀಯ,



ತೃತೀಯ ಸ್ಥಾನ ಪಡೆದ ಮಕ್ಕಳಿಗೆ ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಯಿತು.

ಸಮಾರಂಭ ಅಧ್ಯಕ್ಷತೆಯನ್ನು ಶಾಲೆಯ ಎಸ್.ಡಿ.ಎಮ್.ಸಿ ಅಧ್ಯಕ್ಷರಾದ ಅಂಬಣ್ಣ ಗೌಡ ಅವರು ವಹಿಸಿದ್ದರು, ವೆಂಕೋಬ ನಾಯಕ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಶಿವಕುಮಾರ್ ಕರಿಗುಡ್ಡ, ಬಸವರಾಜ ಹುಲಿಗುಡ್ಡ ಎಸ್.ಡಿ.ಎಮ್.ಸಿ. ಸದಸ್ಯರು, ಮನೋಹರ್ ಶಾಸ್ತ್ರೀ ತಾಲೂಕು ಸಂಪನ್ಮೂಲ ವ್ಯಕ್ತಿಗಳು, ಬಸಯ್ಯ ಸಾತಲ್ ಕ್ಲಸ್ಟರ್ ಸಂಪನ್ಮೂಲ ವ್ಯಕ್ತಿಗಳು,ಹನುಮಂತ ದೊಡ್ಡಮನಿ ಗ್ರಾಮ ಪಂಚಾಯಿತಿ ಸದಸ್ಯರು, ಅಕ್ಕನಾಗಮ್ಮ ನಿವೃತ್ತಿ ಶಿಕ್ಷಕಿ, ಸಿದ್ದಮ್ಮ ಮುಖ್ಯಗುರು, ಬಸವರಾಜ ಸ್ವಾಮಿ, ನಾಗರೆಡ್ಡಿ, ರಾಮನಗೌಡ, ವೇದಿಕೆಯಲ್ಲಿ ಉಪಸ್ಥಿತರಿದ್ದರು.

# ಕಾರ್ಮಿಕರ ಮಕ್ಕಳಿಗಾಗಿ ಕಾರ್ಮಿಕ ವಸತಿಯುತ ಶಾಲೆಯನ್ನು ಮಂಜೂರು ಮಾಡಿಸಲಾಗುವುದು

ಯುವಮಾರ್ಗ ಸುದ್ದಿ



**ಮಾನ್ವಿ,ಡಿ.8–** ತಾಲೂಕಿನ ಬಲ್ಲಟ್ಟಗಿ ಗ್ರಾಮದ ಶಾಸಕರ ನಿವಾಸದ ಅವರಣದಲ್ಲಿ ಶಾಸಕ ಹಂಪಯ್ಯನಾಯಕ ಕಾರ್ಮಿಕ ಇಲಾಖೆಯಿಂದ ಫಲಾನುಭವಿ ಕಾರ್ಮಿಕರಿಗೆ ಕಾರ್ಮಿಕ ಇಲಾಖೆಯಿಂದ ಟೂಲ್ ಕೀಟ್ ಹಾಗೂ ಸೇಪ್ಟಿ ಕೀಟ್ ಗಳನ್ನು ವಿತರಿಸಿ ಮಾತನಾಡಿ ರಾಜ್ಯ ಸರ್ಕಾರವು ಕಾರ್ಮಿಕ ಇಲಾಖೆ ಮೂಲಕ ಅಸಂಘಟಿತ ಕಾರ್ಮಿಕರಿಗೆ ದೈನಂದಿನ ಕೇಲಸಗಳಿಗೆ ಅಗತ್ಯವಾದ ಸ್ವಯಂ ಉದ್ಯೋಗವನ್ನು ಮಾಡಿಕೊಳ್ಳುವುದಕ್ಕೆ ಬೇಕಾಗಿರುವ ಅಗತ್ಯ ಸಲಾಕರಣೆಗಳನ್ನು ಹಾಗೂ ಸುರಕ್ಷ ಪರಿಕಾರಗಳ ಕೀಟ್ ಗಳನ್ನು ವಿತರಿಸಲಾಗುತ್ತಿದೆ ಕಾರ್ಮಿಕರು ಸರ್ಕಾರದ ಸೌಲಭ್ಯಗಳನ್ನು ಪಡೆದುಕೊಂಡು ಉತ್ತಮ ಅದಾಯವನ್ನು ಹೊಂದಿ ತಮ್ಮ ಕುಟುಂಬಗಳನ್ನು ಚೆನ್ನಾಗಿ ನಿರ್ವಹಣೆ ಮಾಡಿ ಹಾಗೂ ತಮ್ಮ ಮಕ್ಕಳಿಗೆ ಉತ್ತಮ ಉನ್ನತ ಶಿಕ್ಷಣವನ್ನು ನೀಡುವ ಮೂಲಕ ಅವರ ಜೀವನವನ್ನು ರೂಪಿಸಿ ಮಾನ್ವಿ ಮತ್ತು ಸಿರವಾರ ತಾಲೂಕುಗಳ ಕಾರ್ಮಿಕ ಕುಟುಂಬಗಳ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವುದಕ್ಕಾಗಿ ಕಾರ್ಮಿಕ ಇಲಾಖೆ ಜಾರಿಗೆ ತಂದಿರುವ ಕಾರ್ಮಿಕ ಮಕ್ಕಳ ವಸತಿಯುತ ಶಾಲೆ ಮಂಜೂರು ಮಾಡುವಂತೆ ಕಾರ್ಮಿಕ ಸಚಿವರಾದ ಸಂತೋಷ ಲಾಡ್ ರವರಿಗೆ ಕೋರಲಾಗುವುದು ಎಂದು ತಿಳಿಸಿದರು.

ಮಾನ್ವಿ ಮತ್ತು ಸಿರವಾರ ತಾಲೂಕುಗಳ ಕಾರ್ಮಿಕರಿಗೆ ಕಾರ್ಮಿಕ ಇಲಾಖೆಯಿಂದ ಮಂಜೂರಾದ ಟೂಲ್ ಕಿಟ್ ಹಾಗೂ ಸೇಪ್ಟಿ ಕೀಟ್ ಗಳನ್ನು ಶಾಸಕರು ವಿತರಿಸಿದರು.

ಕಾರ್ಯಕ್ರಮದಲ್ಲಿ ತಾಲೂಕು ಕಾರ್ಮಿಕ ಇಲಾಖೆಯ ನಿರೀಕ್ಷಕರಾದ ಮಲ್ಲಪ್ಪ, ಸಿಬ್ಬಂದಿಗಳಾದ ಶರಣಬಸವ,ರುದ್ರಪ್ಪನಾಯಕ, ಕಾರ್ಮಿಕ ಸಂಘಟನೆಯ ಮುಖಂಡರಾದ ಪರಶುರಾಮ್ ಬಾಗಲವಾಡ,ಪಂಪ್ಪಣ್ಣ ಚಾಗಿ, ಸದಾನಂದ,ರಮೇಶ, ಜಫಾರ್, ಅಬ್ರಹಾಂ,ಮಾರೇಶ,ಉಮೇಶ್,ಮೌನೇಶ, ಸೇರಿದಂತೆ ಮಾನ್ವಿ ಮತ್ತು ಸಿರವಾರ ತಾಲೂಕುಗಳ ಕಾರ್ಮಿಕರು ಭಾಗವಹಿಸಿದರು.

# ಮಸ್ಕಿ : ಗುಡದೂರು ಶಾಲೆಯಲ್ಲಿ ಮಕ್ಕಳ ಗ್ರಾಮ ಸಭೆ

ಯುವಮಾರ್ಗ ಸುದ್ದಿ




**ಮಸ್ಕಿ,ಡಿ.8–** ತಾಲೂಕಿನ ಗುಡದೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗುಡದೂರು ಗ್ರಾಮ ಉನ್ನತೀಕರಿಸಿದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಗುರುವಾರದಂದು ಮಕ್ಕಳ ಗ್ರಾಮ ಸಭೆ ನಡೆಸಲಾಯಿತು.

ಈ ವೇಳೆ ಪಿಡಿಓ ಕೃಷ್ಣ ಹುನಗುಂದ ಮಾತನಾಡಿ, ಸಂವಿಧಾನ ಮೂಲ ಆಶಯದಂತೆ ಸ್ಥಳೀಯ ಸರ್ಕಾರಗಳು ಸ್ಥಾಪಿತವಾಗಿದ್ದು, ಗ್ರಾಮ ಪಂಚಾಯಿತಿಗಳು ಗ್ರಾಮೀಣ ಭಾಗದ ಅಭಿವೃದ್ಧಿಗಾಗಿ ಸ್ಥಾಪಿತವಾದ ಸ್ವತಂತ್ರ ಕಚೇರಿಗಳಾಗಿದ್ದು, ಇಲ್ಲಿಗೆ ಮಕ್ಕಳು ಸಹ ಬಂದು ಸೌಲಭ್ಯ ಪಡೆಯಬಹುದು ಹಾಗೂ ಮಕ್ಕಳು ಇಂದಿನ ಪ್ರಜೆಗಳು ಬೆಳೆಯುವ ಪೈರು ಮೊಳಕೆಯಲ್ಲಿ ಎಂಬಂತೆ ಈ ವಯಸ್ಸಿನಲ್ಲೇ ಹೆಚ್ಚು ಅವಕಾಶ ಕೊಡಬೇಕು. ವಿದ್ಯಾರ್ಥಿಗಳು ನೀವು ಓದುವ ಶಾಲೆ ಅಥವಾ ವಾಸಿಸುವ ಸ್ಥಳದಲ್ಲಿ ಅಗತ್ಯ ಮೂಲಭೂತ ಸೌಲಭ್ಯಕ್ಕಾಗಿ ಗ್ರಾಪಂ ಸಂಪರ್ಕಿಸಬಹುದು ಎಂದು ತಿಳಿಸಿದರು.

ನಂತರ ಅಂಗನವಾಡಿ ಮೇಲ್ವಿಚಾರಕರಾದ ರಾಧಾ.ಡಿ ಮಕ್ಕಳ ಸಹಾಯವಾಣಿ 1098 ಕುರಿತು ಮಾತನಾಡಿದರು, 18 ವರ್ಷದ ಒಳಗಿನ ಹೆಣ್ಣು ಮಗುವಿಗೆ ಅಥವಾ 21 ವರ್ಷದ ಒಳಗಿನ ಗಂಡು ಮಗುವಿನ ಮದುವೆ ಮಾಡಿದರೆ ಅದು ಬಾಲ್ಯ ವಿವಾಹ ಆ ಸಂದರ್ಭದಲ್ಲಿ ಸ್ಥಳೀಯರು 1098 ಗೆ ಕರೆ ಮಾಡಿ ಸಹಾಯ ಪಡೆಯಿರಿ ಹಾಗೂ ಆ ಊರಿನ ಶಾಲಾ ಮುಖ್ಯ ಶಿಕ್ಷಕರು ಅಥವಾ ಗ್ರಾ.ಪಂ ಪಿಡಿಓ ರವರ ಗಮನಕ್ಕೆ, ಅಥವಾ ಅಂಗನವಾಡಿ ಶಿಕ್ಷಕಿಯರ, ಮೇಲ್ವಿಚಾರಕರ ಗಮನಕ್ಕೆ ತರಲು ತಿಳಿಸಿದರು. ಹಾಗೂ ಎಲ್ಲರೂ ಕಡ್ಡಾಯವಾಗಿ ಶಾಲೆಗೆ ಹೋಗಿ ಶಿಕ್ಷಣ ಕಲಿಯಬೇಕು. ಶಾಲೆ ಬಿಟ್ಟ ಮಕ್ಕಳ ಕುರಿತು ಮಾಹಿತಿ ನೀಡಲು, ಹಾಗೂ ಕಡ್ಡಾಯ ಶಿಕ್ಷಣ, ಮಕ್ಕಳ ಸಹಾಯವಾಣಿ, ಬಾಲ್ಯ ವಿವಾಹ ನಿಷೇಧ, ಮಕ್ಕಳ ರಕ್ಷಣೆ, ಕಾವಲು ಕುರಿತು ಸವಿಸ್ತಾರವಾಗಿ ವಿವರಣೆ ತಿಳಿಸಿದರು.

ಈ ವೇಳೆ ಮೇರನಾಳ ಅಂಗನವಾಡಿ ಕೇಂದ್ರಕ್ಕೆ ಹಾಗೂ ಪರಾಪುರ ಸರಕಾರಿ ಕಿರಿಯ ಉರ್ದು ಪ್ರಾಥಮಿಕ ಶಾಲೆಗೆ ಗ್ರಾಮ ಪಂಚಾಯಿತಿ ವತಿಯಿಂದ ಶಾಲೆಗೆ ಶುದ್ಧ ಕುಡಿಯುವ ನೀರಿನ ವಾಟರ್ ಫಿಲ್ಟರ್ ನೀಡಲಾಯಿತು.

ಈ ಸಂದರ್ಭದಲ್ಲಿ ಪಿಡಿಓ ಕೃಷ್ಣ ಹುನಗುಂದ, ರಮೇಶ ಹೆಡಗಿಬಾಳ್ ಕ್ಯಾಂಪ್, ಗುಡದೂರು ಶಾಲೆಯ ವಿದ್ಯಾರ್ಥಿಗಳು, ಶಿಕ್ಷಕರು, ಅಂಗನವಾಡಿ ಮೇಲ್ವಿಚಾರಕರು, ಆರೋಗ್ಯ ಇಲಾಖೆ ಸಿಬ್ಬಂದಿಗಳು, ಗ್ರಾಮ ಪಂಚಾಯಿತಿ ಕಾರ್ಯಾಲಯದ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# 8.02 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು

**ಕಲಬುರಗಿ,ಡಿ.8–**ಮನೆಯ ಬೆಡ್‌ರೂಮ್‌ನಲ್ಲಿರುವ ಕಪಾಟಿನ ಬೀಗ ತೆರೆದು 84.5 ಗ್ರಾಂ.ಚಿನ್ನಾಭರಣ ಮತ್ತು 40 ಸಾವಿರ ರೂ.ನಗದು ಸೇರಿ 8.02 ಲಕ್ಷ ರೂ.ಮೌಲ್ಯದ ನಗನಾಣ್ಯ ದೋಚಿಕೊಂಡು ಹೋಗಿರುವ ಘಟನೆ ನಗರದ ಲಾಲಗೇರಿ ಕ್ರಾಸ್‌ನ ಜನತಾ ಲೇಔಟ್‌ನಲ್ಲಿ ನಡೆದಿದೆ.

ಡಾ.ಕುಮಾರ ಪ್ರಭುಲಿಂಗ ಅಂಗಡಿ ಎಂಬುವವರ ಮನೆಯ ಬೆಡ್‌ರೂಮ್‌ನಲ್ಲಿರುವ ಕಪಾಟಿನ ಬೀಗ ತೆರೆದು ನಗನಾಣ್ಯ ದೋಚಿಕೊಂಡು ಹೋಗಲಾಗಿದ್ದು, ಅವರು ಈ ಸಂಬಂಧ ಚೌಕ್ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದಾರೆ. ತನಿಖೆ

## ಕಾನೂನು ಪದವೀಧರರಿಂದ ಆಡಳಿತ ನ್ಯಾಯಧೀಕರಣ ತರಬೇತಿಗೆ ಅರ್ಜಿ

**ರಾಯಚೂರು.ಡಿ.8–** ಇಲ್ಲಿನ ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯದಿಂದ 2025–26ನೇ ಸಾಲಿನಲ್ಲಿ ಪರಿಶಿಷ್ಟ ವರ್ಗದ ಕಾನೂನು ಪದವೀಧರರನ್ನು ಆಡಳಿತ ನ್ಯಾಯಧೀಕರಣ ತರಬೇತಿಗೆ ಆಯ್ಕೆ ಮಾಡಲು ಆನ್‌ಲೈನ್ ಮೂಲಕ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು, ಇಲಾಖೆಯ ವೆಬ್‌ಸೈಟ್ ವಿಳಾಸ: www.twd.karnataka.gov.in ರಡಿಯ ಸ್ಟಿಪೆಂಡ್ ಟು ಲಾ ಗ್ರಾಜ್ಯುಯೇಟ್ಸ್ (Stipend to LAW Graduates) ಲಿಂಕ್‌ನಲ್ಲಿ ಡಿಸೆಂಬರ್ 19ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಆನ್‌ಲೈನ್ ಮೂಲಕ ಸಲ್ಲಿಸಿದ ಅರ್ಜಿಯನ್ನು ಎಲ್ಲಾ ದಾಖಲಾತಿಗಳೊಂದಿಗೆ ಜಿಲ್ಲಾ ಅಥವಾ ತಾಲೂಕಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಾರ್ಯಾಲಯಕ್ಕೆ ಕಚೇರಿ ವೇಳೆಯಲ್ಲಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ರಾಯಚೂರು ಇವರನ್ನು ಕಚೇರಿಯ ವೇಳೆಯಲ್ಲಿ ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳಾದ ಶಿವಮಾನಪ್ಪ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಿಸೆಂಬರ್ 10ರಂದು ಯರಗೇರಾ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯ

**ರಾಯಚೂರು,ಡಿ.8–**ಇಲ್ಲಿನ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ–ವಿಭಾಗದ ವ್ಯಾಪ್ತಿಗೆ ಬರುವ 110/11 ಕೆವಿ ಯರಗೇರಾ ವಿದ್ಯುತ್ ಉಪ–ಕೇಂದ್ರದ ವ್ಯಾಪ್ತಿಯಲ್ಲಿ ಬರುವ ಎಫ್–3 ಯರಗೇರಾ ಎನ್‌ಜೆವೈ ಫೀಡರ್‌ನಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಡಿಸೆಂಬರ್ 10ರ ಬೆಳಗ್ಗೆ 10 ಗಂಟೆಯಿಂದ ಸಾಯಂಕಾಲ 05 ಗಂಟೆವರೆಗೆ ಯರಗೇರಾ ಗ್ರಾಮದ ವ್ಯಾಪ್ತಿಯಲ್ಲಿ ವಿದ್ಯುತ್ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕಾರಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ–ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಿಸೆಂಬರ್ 12ರಂದು ಮಾನ್ವಿಯಲ್ಲಿ ಶಿಶಿಕ್ಷು ಮೇಳ

**ರಾಯಚೂರು,ಡಿ.8–** ಜಿಲ್ಲೆಯ ಮಾನವಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ 2025–26ನೇ ಪಿಎಮ್‌ಎನ್‌ಎಎಮ್ ಯೋಜನೆಯಡಿಯಲ್ಲಿ ಶಿಶಿಕ್ಷು ಮೇಳವನ್ನು ಮಾನವಿ ಪಟ್ಟಣದ ಬಸವ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಡಿಸೆಂಬರ್ 12ರ ಬೆಳಿಗ್ಗೆ 10 ಗಂಟೆಗೆ ಆಯೋಜಿಸಲಾಗಿದೆ.

ಈ ಶಿಶಿಕ್ಷು ಮೇಳದಲ್ಲಿ ವಿವಿಧ ಉದ್ದಿಮೆಗಳ ಪ್ರತಿನಿಧಿಗಳು ಭಾಗವಹಿಸುತ್ತಿದ್ದು, ಶಿಶಿಕ್ಷು ತರಬೇತಿಗಾಗಿ ಅಭ್ಯರ್ಥಿಗಳನ್ನು ಆಯ್ಕೆಮಾಡಿಕೊಳ್ಳುತ್ತಿರುವುದರಿಂದ ಐಟಿಐ ದ್ವಿತೀಯ ವರ್ಷದಲ್ಲಿ ತರಬೇತಿ ಪಡೆಯುತ್ತಿರುವ ಹಾಗೂ ಈಗಾಗಲೇ ಐಟಿಐ ಉತ್ತೀರ್ಣರಾದ ತರಬೇತಿದಾರರು ಮತ್ತು ಪಿಯುಸಿ ಹಾಗೂ ಪದವಿಯಲ್ಲಿ ಉತ್ತೀರ್ಣರಾದ ಪುರುಷ ಹಾಗೂ ಮಹಿಳಾ ಅಭ್ಯರ್ಥಿಗಳು ಈ ಮೇಳದಲ್ಲಿ ಭಾಗವಹಿಸಬಹುದಾಗಿದೆ ಎಂದು ಮಾನವಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ರಾಯಚೂರು ಆಕಾಶವಾಣಿಯಲ್ಲಿ ನೇರ ಫೋನ್–ಇನ್ ಕಾರ್ಯಕ್ರಮ

**ರಾಯಚೂರು ಡಿಸೆಂಬರ್ 08 (ಕರ್ನಾಟಕ ವಾರ್ತೆ):** ಆಕಾಶವಾಣಿ ರಾಯಚೂರು ಕೇಂದ್ರವು ಡಿಸೆಂಬರ್ 09ರ ಸಂಜೆ 6.51ರಿಂದ 7.34ರವರೆಗೆ ತುಂಗಭದ್ರ ಅಚ್ಚುಕಟ್ಟು ಪ್ರದೇಶದಲ್ಲಿ ಭತ್ತಕ್ಕೆ ಪರ್ಯಾಯ ಬೆಳೆಪದ್ಧತಿ ಮತ್ತು ಹಿಂಗಾರು ಬೆಳೆಗಳಲ್ಲಿ ಕೀಟಗಳ ನಿರ್ವಹಣೆ ಕುರಿತು ನೇರ ಫೋನ್–ಇನ್ ಕಾರ್ಯಕ್ರಮವನ್ನು ಪ್ರಸಾರ ಮಾಡಲಿದೆ.

ಈ ಕಾರ್ಯಕ್ರಮದಲ್ಲಿ ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಬೇಸಾಯ ವಿಜ್ಞಾನಿಗಳಾದ ಡಾ.ಎಂ.ಎ.ಬಸವಣ್ಣೆಪ್ಪ ಮತ್ತು ಕೀಟ ವಿಜ್ಞಾನಿಗಳಾದ ಡಾ.ಶಿವಾನಂದ ಜಿ ಹಂಚಿನಾಳ ಅವರು ಭಾಗವಹಿಸಿ ರೈತರ ಪ್ರಶ್ನೆಗಳಿಗೆ ಉತ್ತರಿಸಲಿದ್ದಾರೆ. ಕೇಳುಗರು ಬಳಸುಬಹುದಾದ ರಾಯಚೂರು ಆಕಾಶವಾಣಿಯ ದೂರವಾಣಿ ಸಂಖ್ಯೆ 08532295898 ಅಥವಾ 08532–200312 ಇವುಗಳಿಗೆ ಕರೆಮಾಡಿ ತುಂಗಭದ್ರ ಅಚ್ಚುಕಟ್ಟು ಪ್ರದೇಶದಲ್ಲಿ ಭತ್ತಕ್ಕೆ ಪರ್ಯಾಯ ಬೆಳೆಪದ್ಧತಿ ಮತ್ತು ಹಿಂಗಾರು ಬೆಳೆಗಳಲ್ಲಿ ಕೀಟಗಳ ನಿರ್ವಹಣೆ ವಿಷಯದ ಕುರಿತು ಹೆಚ್ಚಿನ ಮಾಹಿತಿಯನ್ನು ಪಡೆಯಬಹುದು. ಸಾರ್ವಜನಿಕರು ಮತ್ತು ರೈತ ಬಾಂಧವರು ಈ ಕಾರ್ಯಕ್ರಮದ ಪ್ರಯೋಜನೆ ಪಡೆಯಲು ಕೋರಲಾಗಿದೆ ಎಂದು ಆಕಾಶವಾಣಿಯ ಕಾರ್ಯಕ್ರಮ ನಿರ್ವಾಹಕರಾದ ವೆಂಕಟೇಶ ಬೇವಿನಬೆಂಚಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

9743497111,9743496111

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H